ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 123 Thursday **29-10-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 123 ಗುರುವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ರಸ್ತೆ ಗುಂಡಿಗಳಲ್ಲಿ ಮುಚ್ಚಿಹೋಗುತ್ತಿದೆಯೇ 2.50 ಕೋಟಿ ಅನುದಾನ?

ನಿಯಮ ಪಾಲಿಸದೆ ದುರಸ್ತಿ ಕಾಮಗಾರಿ ಆರೋಪ; ಗುಣಮಟ್ಟದ ಬಗ್ಗೆ ಸಾರ್ವಜನಿಕರ ಆಕ್ರೋಶ

“ಮುಂಜಾನೆಯ ಮೆರಗು”

ಜಗಳೂರು, ಅ.28– ರಸ್ತೆ ಗುಂಡಿಗಳ ದುರಸ್ತಿ, ಜಂಗಲ್ ಕಟಿಂಗ್ ಸೇರಿದಂತೆ ರಸ್ತೆ ನಿರ್ವಹಣಾ ಕಾಮಗಾರಿಗಳನ್ನು ನಿಯಮಾನುಸಾರ ಹಾಗೂ ಗುಣಮಟ್ಟದಿಂದ ನಿರ್ವಹಿಸಬೇಕಾದ ಗುತ್ತಿಗೆದಾರರು, ಮನಬಂದಂತೆ ಕಾಮಗಾರಿ ನಡೆಸುತ್ತಿದ್ದಾರೆ ಎಂಬ ಆರೋಪಗಳು ಸಾರ್ವಜನಿಕ ವಲಯದಿಂದ ಕೇಳಿಬರುತ್ತಿವೆ. ಗುಣಮಟ್ಟದ ಕಾಮಗಾರಿಗೆ ಹೆಸರಾಗಿದ್ದ ಲೋಕೋಪಯೋಗಿ ಇಲಾಖೆಯ ರಸ್ತೆ ನಿರ್ವಹಣೆ ಕಾರ್ಯಗಳು ಇದೀಗ ಕಳಪೆ ಕಾಮಗಾರಿಯಿಂದಾಗಿ ಪ್ರಶ್ನಾರ್ಹವಾಗುತ್ತಿವೆ ಎಂಬ ಅಸಮಾಧಾನ ವ್ಯಕ್ತವಾಗಿದೆ.

ಲೋಕೋಪಯೋಗಿ ಇಲಾಖೆಯ ವಾರ್ಷಿಕ ನಿರ್ವಹಣೆ ಯೋಜನೆಯಡಿ ಸುಮಾರು 2.50 ಕೋಟಿ ವೆಚ್ಚದಲ್ಲಿ ರಸ್ತೆ ಗುಂಡಿಗಳ ದುರಸ್ತಿ, ರಸ್ತೆಯ ಇಕ್ಕೆಲಗಳಲ್ಲಿನ ಜಾಲಿಗಿಡಗಳ ತೆರವು ಹಾಗೂ ಇತರೆ ನಿರ್ವಹಣಾ ಕಾಮಗಾರಿಗಳನ್ನು ಕೈಗೊಳ್ಳಲು ಯೋಜಿಸಲಾಗಿದೆ. ಆದರೆ, ಕಾಮಗಾರಿಗಳ ನಿರ್ವಹಣೆಯಲ್ಲಿ ನಿಗದಿತ ನಿಯಮಗಳನ್ನು ಪಾಲಿಸಲಾಗುತ್ತಿದೆಯೇ? ಸಾರ್ವಜನಿಕರ ತೆರಿಗೆ ಹಣಕ್ಕೆ ತಕ್ಕ ಗುಣಮಟ್ಟದ ಕೆಲಸ ನಡೆಯುತ್ತಿದೆಯೇ? ಎಂಬ ಪ್ರಶ್ನೆಗಳು ಇದೀಗ ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿವೆ.

ರಸ್ತೆ ಬದಿಯ ಮಣ್ಣಿನಿಂದಲೇ ಗುಂಡಿ ಮುಚ್ಚುವ ಆರೋಪ

ಪಟ್ಟಣದ ಲಿಂಗಣ್ಣನಹಳ್ಳಿ ರಸ್ತೆಯಿಂದ ಅರಸಿನಗುಂಡಿ, ತೊರಣಗಟ್ಟೆ ಮಾರ್ಗದ ವಿವಿಧ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳಲ್ಲಿ ಗುಂಡಿ ಮುಚ್ಚುವ ಕಾಮಗಾರಿಯ ಗುಣಮಟ್ಟದ ಬಗ್ಗೆ ಸಾರ್ವಜನಿಕರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ರಸ್ತೆಯಲ್ಲಿನ ಗುಂಡಿಗಳನ್ನು ಮುಚ್ಚಲು ಅಗತ್ಯ ಗುಣಮಟ್ಟದ ಸಾಮಗ್ರಿಗಳನ್ನು ಬಳಸುವ ಬದಲು, ರಸ್ತೆ ಬದಿಯಲ್ಲೇ ಇರುವ ಮಣ್ಣನ್ನು ಅಗೆದು ಗುಂಡಿಗಳಿಗೆ ತುಂಬಲಾಗುತ್ತಿದೆ ಎಂಬ ಆರೋಪ ಕೇಳಿಬಂದಿದೆ. ಕೆಲವೆಡೆ ಇಟ್ಟಿಗೆ ತ್ಯಾಜ್ಯ ಮಣ್ಣನ್ನೂ ಗುಂಡಿ ಮುಚ್ಚಲು ಬಳಸಲಾಗುತ್ತಿದೆ ಎಂದು ಸಾರ್ವಜನಿಕರು



ದೂರಿದ್ದಾರೆ.

ರಸ್ತೆ ಬದಿಯ ಮಣ್ಣನ್ನು ತೆಗೆದು ಗುಂಡಿ ಮುಚ್ಚುವುದರಿಂದ ರಸ್ತೆಯ ಅಂಚಿನಲ್ಲಿಯೇ ಮತ್ತಷ್ಟು ಗುಂಡಿಗಳು ನಿರ್ಮಾಣವಾಗುವ ಅಪಾಯವಿದೆ. ಇದರಿಂದ ದ್ವಿಚಕ್ರ ವಾಹನ ಸವಾರರು ಹಾಗೂ ಇತರ ವಾಹನ ಚಾಲಕರು ತೊಂದರೆ ಅನುಭವಿಸುವುದರ ಜತೆಗೆ ಅಪಘಾತಗಳಿಗೂ ಆಹ್ವಾನ ನೀಡಿದಂತಾಗುತ್ತದೆ ಎಂಬ ಆತಂಕ ವ್ಯಕ್ತವಾಗಿದೆ.

ಕಿಲೋಮೀಟರ್‌ಗೆ ಬೆರಳೆಣಿಕೆಯ ಗುಂಡಿಗಳ ದುರಸ್ತಿ!

ರಸ್ತೆಯುದ್ದಕ್ಕೂ ಇರುವ ಗುಂಡಿಗಳನ್ನು ಸಮರ್ಪಕವಾಗಿ ಗುರುತಿಸಿ ದುರಸ್ತಿ ಮಾಡುವ ಬದಲು, ಪ್ರತಿ ಕಿಲೋಮೀಟರ್‌ಗೆ ಎರಡು–ಮೂರು ಗುಂಡಿಗಳನ್ನು ಮಾತ್ರ ಮುಚ್ಚಲಾಗುತ್ತಿದೆ ಎಂಬ ಆರೋಪವೂ ಕೇಳಿಬಂದಿದೆ. ಗುಂಡಿಗಳಿಗೆ ತುಂಬಿದ ಮಣ್ಣನ್ನು ರಸ್ತೆಯ ಬುಡದವರೆಗೆ ಸಮರ್ಪಕವಾಗಿ ಹರಡಿ ಸಮತಟ್ಟುಗೊಳಿಸದಿರುವುದರಿಂದ ವಾಹನಗಳ ಸುಗಮ ಸಂಚಾರಕ್ಕೂ ಅಡ್ಡಿಯಾಗುತ್ತಿದೆ ಎನ್ನಲಾಗಿದೆ.

ಮಳೆ, ಬಿಸಿಲು ಹಾಗೂ ನಿರಂತರ ವಾಹನ ಸಂಚಾರದಿಂದ ರಸ್ತೆಗಳು ಹಾಳಾಗುತ್ತಿದ್ದು, ತಾತ್ಕಾಲಿಕವಾಗಿ ಮಣ್ಣು ತುಂಬಿ ಗುಂಡಿ ಮುಚ್ಚುವುದರಿಂದ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯುವುದಿಲ್ಲ. ಕೆಲವೇ ದಿನಗಳಲ್ಲಿ ಮತ್ತೆ ಗುಂಡಿಗಳು ಸೃಷ್ಟಿಯಾದರೆ ದುರಸ್ತಿ ಕಾಮಗಾರಿಗೆ ಖರ್ಚು ಮಾಡಿದ ಹಣ ವ್ಯರ್ಥವಾಗುವ ಸಾಧ್ಯತೆಯಿದೆ. ಹೀಗಾಗಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ನಿಯಮಗಳ ಪಾಲನೆ ಎಲ್ಲಿ?

ರಸ್ತೆ ಗುಂಡಿಗಳ ದುರಸ್ತಿ ಸಂದರ್ಭದಲ್ಲಿ ಸಂಬಂಧಪಟ್ಟ ತಾಂತ್ರಿಕ ನಿಯಮಗಳು ಹಾಗೂ ಇಲಾಖೆಯ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ರಸ್ತೆ ಗುಂಡಿಗಳ ಸ್ವರೂಪ ಮತ್ತು ತಾಂತ್ರಿಕ ಅವಶ್ಯಕತೆಗೆ ಅನುಗುಣವಾಗಿ ಹಾಳಾದ ಭಾಗವನ್ನು ಸಿದ್ಧಪಡಿಸಿ, ಅಗತ್ಯವಿರುವ ವೆಟ್‌ಮಿಕ್ಸ್ ಸೇರಿದಂತೆ ನಿಗದಿತ ಗುಣಮಟ್ಟದ ಸಾಮಗ್ರಿಗಳನ್ನು ಬಳಸಿ, ನಂತರ ಡಾಂಬರೀಕರಣ ಮಾಡಬೇಕಾಗುತ್ತದೆ.

ಅದೇ ರೀತಿ, ರಸ್ತೆಯ ಇಕ್ಕೆಲಗಳಲ್ಲಿ ಬೆಳೆದಿರುವ ಜಾಲಿಗಿಡಗಳನ್ನು ತೆರವುಗೊಳಿಸುವುದು, ರಸ್ತೆ ಬದಿಗಳನ್ನು ಸಮರ್ಪಕವಾಗಿ ನಿರ್ವಹಿಸುವುದು ಹಾಗೂ ಮಣ್ಣನ್ನು ಅಗತ್ಯಕ್ಕೆ ಅನುಗುಣವಾಗಿ ಸಮತಟ್ಟುಗೊಳಿಸುವುದೂ ನಿರ್ವಹಣಾ ಕಾಮಗಾರಿಯ ಪ್ರಮುಖ ಭಾಗಗಳಾಗಿವೆ.

ಆದರೆ, ಕೆಲವು ಗ್ರಾಮಗಳ ರಸ್ತೆಗಳಲ್ಲಿ ಈ ನಿಯಮಗಳನ್ನು ಸಮರ್ಪಕವಾಗಿ ಪಾಲಿಸಲಾಗುತ್ತಿದೆಯೇ ಎಂಬ ಅನುಮಾನ ಸಾರ್ವಜನಿಕರಲ್ಲಿ ಮೂಡಿದೆ. ಇಲಾಖೆಯ ಅಧಿಕಾರಿಗಳು ಕಾಮಗಾರಿಗಳ ಸ್ಥಳ ಪರಿಶೀಲನೆ ನಡೆಸಿ, ನಿಗದಿತ ಪ್ರಮಾಣ ಮತ್ತು ಗುಣಮಟ್ಟದ ಪ್ರಕಾರ ಕೆಲಸ ನಡೆಯುತ್ತಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕಾಗಿದೆ.

ಅಧಿಕಾರಿಗಳ ಹೇಳಿಕೆ ಮತ್ತು ಕಾಮಗಾರಿ ಆರಂಭದ ನಡುವಿನ ಗೊಂದಲ!



ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ಹಾಗೂ ಕೆಲಸ ಆರಂಭಿಸಿರುವ ವಿಚಾರದಲ್ಲಿ ಅಧಿಕಾರಿಗಳ ಹೇಳಿಕೆಗಳು ಸಾರ್ವಜನಿಕರಲ್ಲಿ ಗೊಂದಲ ಮೂಡಿಸಿವೆ.

ಈ ಕುರಿತು ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಶಶಿಕಾಂತ್ ಅವರನ್ನು ವಿಚಾರಿಸಿದಾಗ, ಟೆಂಡರ್ ಪ್ರಕ್ರಿಯೆ ಕರೆಯಲಾಗಿದೆಯೇ ಹೊರತು ಕಾಮಗಾರಿಗಳಿಗೆ ಇನ್ನೂ ವರ್ಕ್ ಆರ್ಡರ್ ನೀಡಿಲ್ಲ ಎಂದು ತಿಳಿಸಿದ್ದಾರೆ.

ಆದರೆ, ಇನ್ನೊಂದೆಡೆ ಕೆಲವು ಗ್ರಾಮಗಳಲ್ಲಿ ರಸ್ತೆ ಗುಂಡಿಗಳ ದುರಸ್ತಿ ಕಾಮಗಾರಿ ಈಗಾಗಲೇ ಆರಂಭವಾಗಿದೆ ಎಂಬ ಆರೋಪಗಳು ಕೇಳಿಬರುತ್ತಿವೆ. ವರ್ಕ್ ಆರ್ಡರ್ ನೀಡುವ ಮೊದಲೇ ಕಾಮಗಾರಿ ಆರಂಭವಾಗಿದೆಯೇ? ಕಾಮಗಾರಿ ನಡೆಸುತ್ತಿರುವವರು ಯಾರು? ಯಾವ ಆದೇಶದ ಮೇರೆಗೆ ಕೆಲಸ ಕೈಗೊಳ್ಳಲಾಗಿದೆ? ಎಂಬ ಪ್ರಶ್ನೆಗಳು ಉದ್ಭವಿಸಿವೆ.

ಈ ಗೊಂದಲಕ್ಕೆ ಲೋಕೋಪಯೋಗಿ ಇಲಾಖೆ ಸ್ಪಷ್ಟನೆ ನೀಡಬೇಕಿದೆ. ಕಾಮಗಾರಿ ಆರಂಭಿಸಿರುವ ಕುರಿತು ದಾಖಲೆಗಳನ್ನು ಪರಿಶೀಲಿಸಿ, ನಿಯಮಾನುಸಾರವೇ ಕೆಲಸ ನಡೆಯುತ್ತಿದೆಯೇ ಎಂಬುದನ್ನು ಸಾರ್ವಜನಿಕರಿಗೆ ತಿಳಿಸಬೇಕೆಂಬ ಆಗ್ರಹವೂ ವ್ಯಕ್ತವಾಗಿದೆ.

ಸಾರ್ವಜನಿಕರ ತೆರಿಗೆ ಹಣಕ್ಕೆ ಬೆಲೆ ಇಲ್ಲವೇ?

ಪ್ರತಿವರ್ಷ ರಸ್ತೆ ಅಭಿವೃದ್ಧಿ ಹಾಗೂ ನಿರ್ವಹಣೆಗಾಗಿ ಅನುದಾನ ಮೀಸಲಿಡಲಾಗುತ್ತಿದ್ದರೂ, ಅನೇಕ ರಸ್ತೆಗಳಲ್ಲಿ ಗುಂಡಿಗಳ ಸಮಸ್ಯೆ ಮರುಕಳಿಸುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ. ರಸ್ತೆ ನಿರ್ವಹಣೆಗೆ ಕೋಟ್ಯಂತರ ರೂಪಾಯಿ ವೆಚ್ಚದ ಯೋಜನೆ ರೂಪಿಸಿದರೂ, ಸ್ಥಳದಲ್ಲಿ ನಿರೀಕ್ಷಿತ ಮಟ್ಟದ ಕಾಮಗಾರಿ ನಡೆಯದಿದ್ದರೆ ಸಾರ್ವಜನಿಕರಿಗೆ ಅದರ ಪ್ರಯೋಜನವೇನು ಎಂಬ ಪ್ರಶ್ನೆ ಎದುರಾಗಿದೆ.

ಸಾರ್ವಜನಿಕರ ತೆರಿಗೆ ಹಣವನ್ನು ಗುಣಮಟ್ಟವಿಲ್ಲದ ಕಾಮಗಾರಿಗಳ ಮೂಲಕ ವ್ಯರ್ಥ ಮಾಡುವುದು ಎಷ್ಟು ಸರಿ? ಎಂದು ಸಾಮಾಜಿಕ ಹೋರಾಟಗಾರ ರಾಘವೇಂದ್ರ ಪ್ರಶ್ನಿಸಿದ್ದಾರೆ.

ಕೆ.ಎಂ. ಸುರೇಶ್ ಗೆಲುವು ಪದವೀಧರರ ಸಮಸ್ಯೆಗಳಿಗೆ ಧ್ವನಿಯಾಗಲಿ: ಹೆಚ್.ಪಿ. ರಾಜೇಶ್

“ಮುಂಜಾನೆಯ ಮೆರಗು”

ಜಗಳೂರು ಅ, 28– ವಿಧಾನ ಪರಿಷತ್ತಿನ ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ಕೆ.ಎಂ. ಸುರೇಶ್ ಅವರು ಭರ್ಜರಿ ಗೆಲುವು ಸಾಧಿಸಿರುವುದಕ್ಕೆ ಜಗಳೂರು ಮಾಜಿ ಶಾಸಕ ಹೆಚ್.ಪಿ. ರಾಜೇಶ್ ಹರ್ಷ ವ್ಯಕ್ತಪಡಿಸಿ, ಅಭಿನಂದನೆ ಸಲ್ಲಿಸಿದ್ದಾರೆ.

ಈ ಗೆಲುವು ಪದವೀಧರರ ಸಮಸ್ಯೆಗಳಿಗೆ ಧ್ವನಿಯಾಗಲು ಹಾಗೂ ಕ್ಷೇತ್ರದ ಅಭಿವೃದ್ಧಿಗೆ ಪೂರಕವಾದ ಉತ್ತಮ ಕಾರ್ಯಗಳನ್ನು ಕೈಗೊಳ್ಳಲು ನಾಂದಿಯಾಗಲಿ ಎಂದು ಅವರು ಆಶಿಸಿದ್ದಾರೆ.



ಚುನಾವಣೆಯಲ್ಲಿ ಕೆ.ಎಂ. ಸುರೇಶ್ ಅವರಿಗೆ ತಮ್ಮ ಅಮೂಲ್ಯ ಮತಗಳನ್ನು ನೀಡಿ ಗೆಲುವಿಗೆ ಸಹಕರಿಸಿದ ಎಲ್ಲ ಪದವೀಧರ ಮತದಾರರಿಗೆ ಹೃದಯಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ. ಪದವೀಧರರ ಆಶೋತ್ತರಗಳಿಗೆ ಸ್ಪಂದಿಸಿ, ಅವರ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡುವ ಮೂಲಕ ಕ್ಷೇತ್ರದ ಪ್ರಗತಿಗೆ ಶ್ರಮಿಸುವಂತಾಗಲಿ ಎಂದು ಹೆಚ್.ಪಿ. ರಾಜೇಶ್ ಶುಭ ಹಾರೈಸಿದ್ದಾರೆ.

ಉಚಿತ ಆರೋಗ್ಯ ಶಿಬಿರಗಳ ಸದುಪಯೋಗ ಪಡೆದುಕೊಳ್ಳಿ: ಡಾ. ವಿಶ್ವನಾಥ್

“ಮುಂಜಾನೆಯ ಮೆರಗು”

ಜಗಳೂರು ಅ, 28– ಸದೃಢ ಆರೋಗ್ಯ ಹೊಂದಿದಾಗ ಮಾತ್ರ ಜೀವನದಲ್ಲಿ ಏನಾದರೂ ಸಾಧಿಸಲು ಸಾಧ್ಯವಾಗುತ್ತದೆ. ಆದ್ದರಿಂದ ಸಾರ್ವಜನಿಕರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವುದರ ಜೊತೆಗೆ, ಉಚಿತ ಆರೋಗ್ಯ ಶಿಬಿರಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಾಲೂಕು ಆರೋಗ್ಯಾಧಿಕಾರಿ ಡಾ. ವಿಶ್ವನಾಥ್ ಸಲಹೆ ನೀಡಿದರು.

ಪಟ್ಟಣದ ಲಕ್ಷ್ಮಮ್ಮ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಬುಧವಾರ ತಾಲೂಕು ಆರೋಗ್ಯ ಇಲಾಖೆ ಹಾಗೂ ನಮ್ಮ ಕ್ಲಿನಿಕ್ ವತಿಯಿಂದ ಆಯೋಜಿಸಿದ್ದ ಬೃಹತ್ ಉಚಿತ ಆರೋಗ್ಯ ಶಿಬಿರವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರ ಜೀವನದಲ್ಲಿ ಆರೋಗ್ಯ ಅತ್ಯಂತ ಮಹತ್ವದ ಪಾತ್ರ ವಹಿಸುತ್ತದೆ. ಉತ್ತಮ ಆರೋಗ್ಯವಿದ್ದಾಗ ಮಾತ್ರ ದೈನಂದಿನ ಚಟುವಟಿಕೆಗಳನ್ನು ಉತ್ಸಾಹದಿಂದ ನಿರ್ವಹಿಸಲು ಹಾಗೂ ಜೀವನದಲ್ಲಿ ಗುರಿ ಸಾಧಿಸಲು ಸಾಧ್ಯವಾಗುತ್ತದೆ. ಆದರೆ, ಇತ್ತೀಚಿನ ದಿನಗಳಲ್ಲಿ ಒತ್ತಡದ ಜೀವನಶೈಲಿ, ಆಹಾರ ಪದ್ಧತಿಯಲ್ಲಿನ ಬದಲಾವಣೆ ಹಾಗೂ ಆರೋಗ್ಯದ ಕಡೆಗೆ ನಿರ್ಲಕ್ಷ್ಯ ವಹಿಸುತ್ತಿರುವುದರಿಂದ ಅನೇಕರು ವಿವಿಧ ಕಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

ಆರೋಗ್ಯ ಸಮಸ್ಯೆಗಳು ಕಾಣಿಸಿಕೊಂಡ ನಂತರ ಚಿಕಿತ್ಸೆ ಪಡೆಯುವುದಕ್ಕಿಂತ, ಕಾಯಿಲೆಗಳು ಬಾರದಂತೆ ಮುನ್ನೆಚ್ಚರಿಕೆ ವಹಿಸುವುದು ಮುಖ್ಯ. ಈ ನಿಟ್ಟಿನಲ್ಲಿ ಸಾರ್ವಜನಿಕರು ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಪೌಷ್ಟಿಕಾಂಶಯುಕ್ತ ಆಹಾರ ಸೇವನೆ, ಹಣ್ಣು–ತರಕಾರಿಗಳ ಬಳಕೆ, ಸಮತೋಲಿತ ಆಹಾರ ಪದ್ಧತಿ ಹಾಗೂ ನಿಯಮಿತ ವ್ಯಾಯಾಮಕ್ಕೆ ಆದ್ಯತೆ ನೀಡಬೇಕು. ಯಾವುದೇ ಆರೋಗ್ಯ ಸಮಸ್ಯೆ ಕಂಡುಬಂದರೂ ನಿರ್ಲಕ್ಷ್ಯ ಮಾಡದೆ ವೈದ್ಯರನ್ನು ಸಂಪರ್ಕಿಸಬೇಕು. ಆರೋಗ್ಯ ಇಲಾಖೆಯಿಂದ ಆಯೋಜಿಸುವ ಉಚಿತ ಆರೋಗ್ಯ ಶಿಬಿರಗಳನ್ನು ಬಳಸಿಕೊಂಡು ತಮ್ಮ ಆರೋಗ್ಯದ ಸ್ಥಿತಿಯನ್ನು ತಿಳಿದುಕೊಳ್ಳಬೇಕು ಎಂದು ಹೇಳಿದರು.

ಮಕ್ಕಳ ಆರೋಗ್ಯದ ಕಡೆಗೆ ವಿಶೇಷ ಗಮನ ಅಗತ್ಯ



ಮಕ್ಕಳ ತಜ್ಞ ಡಾ. ಪ್ರವೀಣ್ ಮಾತನಾಡಿ, ಮಕ್ಕಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಪೌಷ್ಟಿಕಾಂಶಯುಕ್ತ ಆಹಾರ ಅತ್ಯಗತ್ಯ. ಪೋಷಕರು ಮಕ್ಕಳ ಆಹಾರ ಪದ್ಧತಿ ಮತ್ತು ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು. ಮಕ್ಕಳನ್ನು ಮೊಬೈಲ್ ಬಳಕೆಯಿಂದ ಸಾಧ್ಯವಾದಷ್ಟು ದೂರವಿಟ್ಟು, ಆಟೋಟ ಹಾಗೂ ದೈಹಿಕ ಚಟುವಟಿಕೆಗಳಲ್ಲಿ ತೊಡಗಿಸಬೇಕು. ಅಲ್ಲದೆ, ಮಕ್ಕಳಿಗೆ ನಿಗದಿತ ಸಮಯದಲ್ಲಿ ಅಗತ್ಯ ಲಸಿಕೆಗಳನ್ನು ಹಾಕಿಸುವ ಮೂಲಕ ವಿವಿಧ ಕಾಯಿಲೆಗಳಿಂದ ರಕ್ಷಿಸಬೇಕು ಎಂದು ತಿಳಿಸಿದರು.

ಶಿಬಿರದಲ್ಲಿ ವಿವಿಧ ಆರೋಗ್ಯ ಸಮಸ್ಯೆಗಳಿಗೆ ಸಂಬಂಧಿಸಿದಂತೆ ವೈದ್ಯರು ಸಾರ್ವಜನಿಕರಿಗೆ ಸಲಹೆ ನೀಡಿದರು. ನೂರಾರು ಸಾರ್ವಜನಿಕರು ಶಿಬಿರದಲ್ಲಿ ಪಾಲ್ಗೊಂಡು ಆರೋಗ್ಯ ತಪಾಸಣೆ ಮಾಡಿಸಿಕೊಂಡರು.

ಈ ಸಂದರ್ಭದಲ್ಲಿ ವೈದ್ಯರಾದ ಡಾ. ಶಾಲಿನಿ, ಹೆರಿಗೆ ಮತ್ತು ಸ್ತ್ರೀರೋಗ ತಜ್ಞ ಡಾ. ಚೇತನ್, ತಾಲೂಕು ಆರೋಗ್ಯ ಇಲಾಖೆಯ ಸಿಬ್ಬಂದಿ ಮಂಜುನಾಥ್, ಆರ್‌ಬಿಎಸ್‌ಕೆ ತಂಡದ ಸದಸ್ಯರು ಹಾಗೂ ನಮ್ಮ ಕ್ಲಿನಿಕ್ ಸಿಬ್ಬಂದಿ ಉಪಸ್ಥಿತರಿದ್ದರು.

ನಿರಂಜನಾನಂದಪುರಿ ಸ್ವಾಮೀಜಿಗಳ ಆಶೀರ್ವಾದ ಪಡೆದ ಆಂಜಿನಪ್ಪ

“ಮುಂಜಾನೆಯ ಮೆರಗು”

ಜಗಳೂರು ಅ, 28– ತಾಲೂಕಿನ ಚಿಕ್ಕ ಉಜ್ಜಿನಿ ಗ್ರಾಮದ ಆಂಜಿನಪ್ಪ ಅವರು ಹರಿಹರ ತಾಲೂಕಿನ ಹಾಲುಮತ ಸಮಾಜದ ಪ್ರಸಿದ್ಧ ಧಾರ್ಮಿಕ ಕೇಂದ್ರವಾದ ಕನಕ ಗುರುಪೀಠಕ್ಕೆ ಭೇಟಿ ನೀಡಿ, ಹಾಲುಮತ ಸಮಾಜದ ಕುಲಗುರುಗಳಾದ ಶ್ರೀ ನಿರಂಜನಾನಂದಪುರಿ ಮಹಾಸ್ವಾಮಿಗಳನ್ನು ಭೇಟಿಯಾಗಿ ಗೌರವ ಸಲ್ಲಿಸಿ, ಅವರಿಂದ ಆಶೀರ್ವಾದ ಪಡೆದರು.



ಈ ಸಂದರ್ಭದಲ್ಲಿ ಶ್ರೀ ನಿರಂಜನಾನಂದಪುರಿ ಮಹಾಸ್ವಾಮಿಗಳು ಮಾತನಾಡಿ, ಸಮಾಜದ ಪ್ರತಿಯೊಬ್ಬರೂ ಪರಸ್ಪರ ಪ್ರೀತಿ, ವಿಶ್ವಾಸ ಹಾಗೂ ಸಹೋದರತ್ವದ ಭಾವನೆಯಿಂದ ಬದುಕಬೇಕು. ಸಮಾಜದ ಏಳಿಗೆಗೆ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡಬೇಕು. ಯುವಜನರು ಶಿಕ್ಷಣ, ಸಂಸ್ಕಾರ ಮತ್ತು ಉತ್ತಮ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಆಶೀರ್ವಚನ ನೀಡಿದರು.

ಕೆರೆಯ ನೀರು ದುರ್ಬಳಕೆ: ಡೀಸೆಲ್ ಮೋಟಾರ್‌ಗಳು ವಶಕ್ಕೆ

“ಮುಂಜಾನೆಯ ಮೆರಗು”

ಜಗಳೂರು ಅ, 28– ತಾಲ್ಲೂಕಿನ ಕೇಳಗೋಟೆ ಗ್ರಾಮದ ಕೆರೆಯಿಂದ ಡೀಸೆಲ್ ಮೋಟಾರ್‌ಗಳನ್ನು ಬಳಸಿ ನೀರು ಹಾಯಿಸುತ್ತಿದ್ದ ಮೋಟಾರ್‌ಗಳನ್ನು ಕಂದಾಯ, ಪಂಚಾಯತ್ ರಾಜ್ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ನಡೆಸಿ ವಶಪಡಿಸಿಕೊಂಡರು.

ತಾಲ್ಲೂಕಿನಲ್ಲಿ ಬರಗಾಲದ ಪರಿಸ್ಥಿತಿ ತೀವ್ರವಾಗಿರುವ ಹಿನ್ನೆಲೆಯಲ್ಲಿ ಕೆರೆಯ ನೀರನ್ನು ಅನಧಿಕೃತವಾಗಿ ಬಳಕೆ ಮಾಡುತ್ತಿರುವುದನ್ನು ತಡೆಯುವ ಉದ್ದೇಶದಿಂದ ಅಧಿಕಾರಿಗಳು ಈ ಕಾರ್ಯಾಚರಣೆ ನಡೆಸಿದರು. ಕೆರೆಯಲ್ಲಿರುವ ನೀರನ್ನು ಕೆಲವರು



ವೈಯಕ್ತಿಕ ಉದ್ದೇಶಗಳಿಗೆ ಬಳಸಿದರೆ, ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಆತಂಕವಿದೆ. ಹೀಗಾಗಿ ಕೆರೆಯ ನೀರನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮ ಕೈಗೊಂಡರು.

ಈ ಸಂದರ್ಭದಲ್ಲಿ ವಲಯ ಅರಣ್ಯಾಧಿಕಾರಿ ತಿಪ್ಪೇಸ್ವಾಮಿ, ಪಿಡಿಒ ಗುರುಬಸವರಾಜ್, “ಕೆರೆಯ ನೀರು ಎಲ್ಲರಿಗೂ ಸೇರಿದ್ದು, ಅದನ್ನು ಒಬ್ಬರೇ ತಮ್ಮ ಸ್ವಂತ ಉದ್ದೇಶಕ್ಕೆ ಬಳಸಿಕೊಳ್ಳುವುದು ಸರಿಯಲ್ಲ. ರೈತರು ಈ ವಿಚಾರವನ್ನು ಅರ್ಥಮಾಡಿಕೊಂಡು ನೀರಿನ ಬಳಕೆಯಲ್ಲಿ ಜವಾಬ್ದಾರಿ ವಹಿಸಬೇಕು” ಎಂದು ತಿಳಿಸಿದರು.

ತಾಲ್ಲೂಕಿನಲ್ಲಿ ಬರಗಾಲ ತಾಂಡವವಾಡುತ್ತಿದ್ದು, ಈಗಿರು

ಗ್ರಾಮೀಣ ವಿದ್ಯಾರ್ಥಿಗಳಿಗೆ ಉದ್ಯೋಗಾಧಾರಿತ ಶಿಕ್ಷಣ ಅಗತ್ಯ: ಡಾ. ಗುರುರಾಜ್ ದೇಶಪಾಂಡೆ

"ಮುಂಜಾನೆಯ ಮೆರಗು"

ದಾವಣಗೆರೆ ಅ, 28– ಗ್ರಾಮೀಣ ಶಿಕ್ಷಣ ಸಂಸ್ಥೆಗಳಲ್ಲಿ ಪದವಿ ಪಡೆಯುವ ವಿದ್ಯಾರ್ಥಿಗಳಿಗೆ ಸಂವಹನ, ವಿಶ್ಲೇಷಣಾತ್ಮಕ ಚಿಂತನೆ ಮತ್ತು ಕಂಪ್ಯೂಟರ್ ಕೌಶಲ್ಯಗಳನ್ನು ಕಲಿಸುವ ಮೂಲಕ ಉದ್ಯೋಗಕ್ಕೆ ಸಜ್ಜುಗೊಳಿಸುವುದು ಇಂದಿನ ಅಗತ್ಯವಾಗಿದೆ ಎಂದು ದೇಶಪಾಂಡೆ ಫೌಂಡೇಶನ್ನ ಸಂಸ್ಥಾಪಕ ಡಾ. ಗುರುರಾಜ್ ದೇಶಪಾಂಡೆ ಹೇಳಿದರು.



ದಾವಣಗೆರೆ ವಿಶ್ವವಿದ್ಯಾನಿಲಯದ ಎಂಬಿಎ ಸಭಾಂಗಣದಲ್ಲಿ ಬುಧವಾರ ಆಯೋಜಿಸಿದ್ದ ಶಿಕ್ಷಕರೊಂದಿಗಿನ ಸಂವಾದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಗ್ರಾಮೀಣ ಶಿಕ್ಷಣ ಸಂಸ್ಥೆಗಳು ಹಣಕಾಸಿನ ಕೊರತೆ, ಪ್ರತಿಭಾವಂತ ಸಂಪನ್ಮೂಲಗಳ ಅಭಾವ ಹಾಗೂ ಮೂಲಸೌಕರ್ಯಗಳ ಸಮಸ್ಯೆಗಳನ್ನು ಎದುರಿಸುತ್ತಿವೆ. ಇಂತಹ ಸವಾಲುಗಳನ್ನು ನಿವಾರಿಸಲು ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸುವುದರ ಮೇಲೆ ವಿಶೇಷ ಗಮನಹರಿಸಬೇಕು ಎಂದು ಅಭಿಪ್ರಾಯಪಟ್ಟರು.

ಹುಬ್ಬಳ್ಳಿಯಲ್ಲಿ ಸ್ಥಾಪಿಸಿರುವ ವಸತಿ ತರಬೇತಿ ಕೇಂದ್ರದಲ್ಲಿ ಸುಮಾರು 1,400 ವಿದ್ಯಾರ್ಥಿಗಳಿಗೆ ತರಬೇತಿ ಪಡೆಯುವ ಅವಕಾಶವಿದೆ. ಕಳೆದ 15 ವರ್ಷಗಳಿಂದ ಈ ಕಾರ್ಯಕ್ರಮವನ್ನು ನಡೆಸಲಾಗುತ್ತಿದ್ದು, ಹತ್ತು ವರ್ಷಗಳ ಅನುಭವದ ಆಧಾರದ ಮೇಲೆ ಕೇವಲ ಮೂರು ತಿಂಗಳಲ್ಲಿ ಉದ್ಯೋಗಕ್ಕೆ ಅಗತ್ಯವಾದ ಕೌಶಲ್ಯಗಳನ್ನು ಕಲಿಸುವ ತರಬೇತಿ ಮಾದರಿಯನ್ನು ರೂಪಿಸಲಾಗಿದೆ ಎಂದು ತಿಳಿಸಿದರು.

ಈ ಕೇಂದ್ರದಲ್ಲಿ ತರಬೇತಿ ಪಡೆದ ವಿದ್ಯಾರ್ಥಿಗಳ ಉದ್ಯೋಗ ನಿಯೋಜನೆ ಪ್ರಮಾಣ ಸುಮಾರು ಶೇ.100ರಷ್ಟಿದೆ. ಅವರು ವಾರ್ಷಿಕ 2.5 ಲಕ್ಷದಿಂದ 4 ಲಕ್ಷದವರೆಗೆ ವೇತನ ಪಡೆಯುತ್ತಿದ್ದು, ಇದರಿಂದ ಅವರ ಜೀವನಮಟ್ಟದಲ್ಲಿ ಗಮನಾರ್ಹ ಸುಧಾರಣೆಯಾಗಿದೆ ಎಂದರು.

ವಸತಿ ತರಬೇತಿ ಕೇಂದ್ರಗಳಿಗೆ ಮಾತ್ರ ಸೀಮಿತವಾಗದೆ, ಈ ಮಾದರಿಯನ್ನು ಗ್ರಾಮೀಣ ಕಾಲೇಜುಗಳಲ್ಲಿಯೂ ಅನುಷ್ಠಾನಗೊಳಿಸುವುದು ಮುಂದಿನ ಗುರಿಯಾಗಿದೆ. ಕಳೆದ ಆರು–ಏಳು ವರ್ಷಗಳಿಂದ ಕೆಲವು ಕಾಲೇಜುಗಳಲ್ಲಿ ಇಂತಹ ತರಬೇತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಕಾಲೇಜುಗಳು ಸೂಕ್ತ ಕೊಠಡಿ ಹಾಗೂ ಕಾರ್ಯನಿರ್ವಹಿಸುವ ಕಂಪ್ಯೂಟರ್ ಪ್ರಯೋಗಾಲಯದ ಸೌಲಭ್ಯ ಒದಗಿಸಿದರೆ ವಿದ್ಯಾರ್ಥಿಗಳಿಗೆ ತರಬೇತಿ ನೀಡಬಹುದು. ಶೈಕ್ಷಣಿಕ ವರ್ಷದ ಅವಧಿಯಲ್ಲಿ ಪ್ರತಿದಿನ ಮಧ್ಯಾಹ್ನ 3ರಿಂದ ಸಂಜೆ 5ರವರೆಗೆ ತರಬೇತಿ ನೀಡುವ ಮೂಲಕ ಶೇ.70ರಿಂದ 80ರಷ್ಟು ಉದ್ಯೋಗ ನಿಯೋಜನೆ ಪ್ರಮಾಣ ಸಾಧಿಸಲಾಗಿದೆ ಎಂದು ವಿವರಿಸಿದರು.

ಕೃತಕ ಬುದ್ಧಿಮತ್ತೆಯ ಯುಗಕ್ಕೆ ಅನುಗುಣವಾಗಿ ಶಿಕ್ಷಣ ವ್ಯವಸ್ಥೆಯಲ್ಲಿಯೂ ಬದಲಾವಣೆ ಅಗತ್ಯವಾಗಿದೆ. ತಂತ್ರಜ್ಞಾನ ಕ್ಷೇತ್ರದಲ್ಲಿ ಬದಲಾವಣೆಗಳು ಹಿಂದೆಂದಿಗಿಂತಲೂ ವೇಗವಾಗಿ ನಡೆಯುತ್ತಿವೆ. ಲ್ಯಾಂಡ್ಲೈನ್ ದೂರವಾಣಿಗಳು ವ್ಯಾಪಕ ಬಳಕೆಗೆ ಬರಲು ಸುಮಾರು 100 ವರ್ಷಗಳು, ದೂರದರ್ಶನಕ್ಕೆ 70 ವರ್ಷಗಳು ಹಾಗೂ ಮೊಬೈಲ್ ಫೋನ್ಗಳಿಗೆ 25 ವರ್ಷಗಳು ಬೇಕಾದವು. ಆದರೆ ಎಐ ಆಧಾರಿತ ತಂತ್ರಜ್ಞಾನಗಳು ಅತ್ಯಂತ ಕಡಿಮೆ ಅವಧಿಯಲ್ಲಿ ಕೋಟ್ಯಂತರ ಬಳಕೆದಾರರನ್ನು ತಲುಪಿವೆ ಎಂದು ತಂತ್ರಜ್ಞಾನದ ಬೆಳವಣಿಗೆಯ ವೇಗವನ್ನು ವಿವರಿಸಿದರು.

ಈ ಬದಲಾವಣೆಗಳಿಗೆ ಅನುಗುಣವಾಗಿ ಕಾಲೇಜುಗಳು ತಮ್ಮ ಬೋಧನಾ ವಿಧಾನಗಳನ್ನು ಪರಿಷ್ಕರಿಸಬೇಕು. ಬಿ.ಕಾಂ., ಬಿ.ಎ., ಭೌತಶಾಸ್ತ್ರ, ಗಣಿತ ಅಥವಾ ಕಂಪ್ಯೂಟರ್ ವಿಜ್ಞಾನ ಸೇರಿದಂತೆ ಯಾವುದೇ ವಿಷಯದಲ್ಲಿ ಪದವಿ ಪಡೆದರೂ, ವಿದ್ಯಾರ್ಥಿಗಳು ಸ್ವತಂತ್ರವಾಗಿ ಕಲಿಯುವ ಸಾಮರ್ಥ್ಯವನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

"ವಿದ್ಯಾರ್ಥಿಗಳಿಗೆ ಕಲಿಸಬೇಕಾದ ಅತ್ಯಂತ ಮೂಲಭೂತ ಕೌಶಲ್ಯವೆಂದರೆ ಹೇಗೆ ಕಲಿಯಬೇಕು ಎಂಬುದನ್ನು ಕಲಿಸುವುದು" ಎಂದು ಹೇಳಿದ ಅವರು, ನಿರಂತರವಾಗಿ ಹೊಸ ಜ್ಞಾನವನ್ನು ಗಳಿಸುವ ಸಾಮರ್ಥ್ಯವೇ ಭವಿಷ್ಯದ ಉದ್ಯೋಗ ಜಗತ್ತಿನಲ್ಲಿ ಯಶಸ್ಸು ಸಾಧಿಸಲು ಪ್ರಮುಖವಾಗಲಿದೆ ಎಂದರು.



ಭಾರತದಲ್ಲಿ ಯುವಜನರ ಸಂಖ್ಯೆ ಹೆಚ್ಚಿರುವುದಷ್ಟೇ ಬಲಿಷ್ಠ ಆರ್ಥಿಕತೆಯನ್ನು ನಿರ್ಮಿಸಲು ಸಾಕಾಗುವುದಿಲ್ಲ. ಯುವಜನರು ತಮ್ಮ ಜ್ಞಾನ, ಬುದ್ಧಿಶಕ್ತಿ ಮತ್ತು ಕೌಶಲ್ಯಗಳನ್ನು ಬಳಸಿಕೊಂಡು ಜಾಗತಿಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಸಾಮರ್ಥ್ಯ ಬೆಳೆಸಿಕೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.

ಗ್ರಾಮೀಣ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳಿಗೂ ನಗರ ಪ್ರದೇಶದ ವಿದ್ಯಾರ್ಥಿಗಳಂತೆ ಉತ್ತಮ ಉದ್ಯೋಗಾವಕಾಶಗಳನ್ನು ಪಡೆಯಲು ನೆರವಾಗುವ ಶಿಕ್ಷಣ ವ್ಯವಸ್ಥೆಯನ್ನು ರೂಪಿಸುವುದು ಎಲ್ಲರ ಸಾಮೂಹಿಕ ಜವಾಬ್ದಾರಿಯಾಗಿದೆ ಎಂದು ಕರೆ ನೀಡಿದರು.

ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಬಿ.ಇ. ರಂಗಸ್ವಾಮಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಶ್ರೀಮತಿ ಜಯಶ್ರೀ ದೇಶಪಾಂಡೆ, ಕುಲಸಚಿವ ಎಸ್.ಬಿ. ಗಂಟಿ, ಪರೀಕ್ಷಾಂಗ ಕುಲಸಚಿವ ಪ್ರೊ. ಸಿ.ಕೆ. ರಮೇಶ್ ಹಾಗೂ ಹಣಕಾಸು ಅಧಿಕಾರಿ ಪ್ರೊ. ಶಶಿಧರ್ ಉಪಸ್ಥಿತರಿದ್ದರು.

ಎನ್‌ಡಿಎ ಗೆಲುವು ಕಾರ್ಯಕರ್ತರ ಪರಿಶ್ರಮದ ಫಲ: ಬಿ.ವೈ.ವಿಜಯೇಂದ್ರ

ಮೈಸೂರಿನಲ್ಲಿ ಬಿಜೆಪಿ ಕಾರ್ಯಕರ್ತರೊಂದಿಗೆ ವಿಜಯೋತ್ಸವ ಆಚರಣೆ

"ಮುಂಜಾನೆಯ ಮೆರಗು"

ಮೈಸೂರು ಅ, 28– ವಿಧಾನ ಪರಿಷತ್ ಚುನಾವಣೆಯಲ್ಲಿ ಶಿಕ್ಷಕರ ಹಾಗೂ ಪದವೀಧರರ ನಾಲ್ಕೂ ಕ್ಷೇತ್ರಗಳಲ್ಲಿ ಎನ್‌ಡಿಎ ಅಭ್ಯರ್ಥಿಗಳು ನಿಚ್ಚಳ ಗೆಲುವು ಸಾಧಿಸಿರುವುದು ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತರ ಪರಿಶ್ರಮದ ಫಲವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ಮೈಸೂರಿನ ಬಿಜೆಪಿ ಕಾರ್ಯಾಲಯದಲ್ಲಿ ಬುಧವಾರ ಪಕ್ಷದ ಕಾರ್ಯಕರ್ತರೊಂದಿಗೆ ಸಿಹಿ ಹಂಚಿ ವಿಜಯೋತ್ಸವ ಆಚರಿಸಿದ ಅವರು, ಚುನಾವಣೆಯಲ್ಲಿ ಪಕ್ಷಕ್ಕೆ ಬೆಂಬಲ ನೀಡಿದ ಮತದಾರರಿಗೆ ಕೃತಜ್ಞತೆ ಸಲ್ಲಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದ ಮೇಲೆ ವಿಶ್ವಾಸವಿಟ್ಟ ರಾಜ್ಯದ ಶಿಕ್ಷಕರು ಹಾಗೂ ಪದವೀಧರ ಮತದಾರರು ಕಾಂಗ್ರೆಸ್ ಸರ್ಕಾರದ ಜನವಿರೋಧಿ ನೀತಿಗಳಿಗೆ ತಕ್ಕ ಉತ್ತರ ನೀಡಿದ್ದಾರೆ. ಈ ಗೆಲುವು ಬಿಜೆಪಿ–ಜೆಡಿಎಸ್ ಮೈತ್ರಿಕೂಟದ ಒಗ್ಗಟ್ಟು, ಸಂಘಟಿತ ಹೋರಾಟ ಹಾಗೂ ಕಾರ್ಯಕರ್ತರ ನಿರಂತರ ಶ್ರಮಕ್ಕೆ ಸಂದ ಜಯವಾಗಿದೆ ಎಂದು ತಿಳಿಸಿದರು.

ಎನ್‌ಡಿಎ ಅಭ್ಯರ್ಥಿಗಳ ಗೆಲುವಿಗಾಗಿ ಹಗಲಿರುಳು ಶ್ರಮಿಸಿದ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರನ್ನು ಅಭಿನಂದಿಸಿದ ಅವರು, ಜಯಗಳಿಸಿದ ನಾಲ್ವರು ಅಭ್ಯರ್ಥಿಗಳಿಗೂ ಹೃತ್ಪೂರ್ವಕ ಶುಭಾಶಯಗಳನ್ನು ಸಲ್ಲಿಸಿದರು.



ಈ ಸಂದರ್ಭದಲ್ಲಿ ಶಾಸಕ ಶ್ರೀವತ್ಸ, ವಿಧಾನ ಪರಿಷತ್ ಸದಸ್ಯ ರಘು ಕೌಟಿಲ್ಯ, ಮಾಜಿ ಶಾಸಕರಾದ ನಿರಂಜನಕುಮಾರ್ ಮತ್ತು ಹರ್ಷವರ್ಧನ್, ಮೈಸೂರು ವಿಭಾಗದ ಪಕ್ಷದ ಪ್ರಭಾರಿ ಸ್ವಾಮಿ ಮರಳಾಪುರ, ರಾಜ್ಯ ಉಪಾಧ್ಯಕ್ಷರಾದ ಎನ್. ಮಹೇಶ್ ಮತ್ತು ರಾಜೇಂದ್ರ, ನಗರಾಧ್ಯಕ್ಷ ನಾಗೇಂದ್ರ, ಗ್ರಾಮಾಂತರ ಅಧ್ಯಕ್ಷ ಕುಮರಳ್ಳಿ ಸುಬ್ಬಣ್ಣ ಸೇರಿದಂತೆ ಪಕ್ಷದ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಪೌರಕಾರ್ಮಿಕರೊಂದಿಗೆ ಟೀ ಸವಿದ ಸಚಿವ ಕೆ.ಎಸ್. ಬಸವಂತಪ್ಪ

"ಮುಂಜಾನೆಯ ಮೆರಗು"

ದಾವಣಗೆರೆ ಅ, 28– ನಗರದ ಸ್ವಚ್ಛತೆ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವ ಪೌರಕಾರ್ಮಿಕರೊಂದಿಗೆ ಸಚಿವ ಕೆ.ಎಸ್. ಬಸವಂತಪ್ಪ ಅವರು ಬುಧವಾರ ಬೆಳ್ಳಂಬೆಳಗ್ಗೆ ಟೀ ಸವಿಯುತ್ತಾ ಆತ್ಮೀಯವಾಗಿ ಮಾತುಕತೆ ನಡೆಸಿದರು.



ಈ ಸಂದರ್ಭದಲ್ಲಿ ಪೌರಕಾರ್ಮಿಕರೊಂದಿಗೆ ಬೆರೆತ ಸಚಿವರು, ಅವರ ದೈನಂದಿನ ಕೆಲಸ ಕಾರ್ಯಗಳು ಹಾಗೂ ಕರ್ತವ್ಯದ ವೇಳೆ ಎದುರಿಸುತ್ತಿರುವ ಸಮಸ್ಯೆಗಳ ಕುರಿತು ವಿಚಾರಿಸಿದರು. ಮುಂಜಾನೆಯಿಂದಲೇ ನಗರದ ಸ್ವಚ್ಛತೆಗಾಗಿ ಶ್ರಮಿಸುವ ಪೌರಕಾರ್ಮಿಕರ ಸೇವೆಯನ್ನು ಸ್ಮರಿಸಿ, ಅವರೊಂದಿಗೆ ಆತ್ಮೀಯ ಕ್ಷಣಗಳನ್ನು ಕಳೆದರು.

ನಗರದ ಸ್ವಚ್ಛತೆ ಹಾಗೂ ಸಾರ್ವಜನಿಕರ ಆರೋಗ್ಯದ ರಕ್ಷಣೆಯಲ್ಲಿ ಪೌರಕಾರ್ಮಿಕರ ಕೊಡುಗೆ ಅಪಾರವಾಗಿದೆ. ಸಾರ್ವಜನಿಕರು ಸ್ವಚ್ಛ ಹಾಗೂ ಆರೋಗ್ಯಕರ ಪರಿಸರದಲ್ಲಿ ಬದುಕಲು ಪೌರಕಾರ್ಮಿಕರು ಪ್ರತಿದಿನ ಶ್ರಮಿಸುತ್ತಿದ್ದಾರೆ. ಅವರ ಸೇವೆಯನ್ನು ಗೌರವಿಸುವುದರ ಜೊತೆಗೆ, ಅವರ ಹಿತಾಸಕ್ತಿ ಮತ್ತು ಕಲ್ಯಾಣಕ್ಕೆ ಆದ್ಯತೆ ನೀಡುವುದು ಸಮಾಜದ ಜವಾಬ್ದಾರಿಯಾಗಿದೆ ಎಂಬ ಸಂದೇಶ ಈ ಭೇಟಿಯ ಮೂಲಕ ವ್ಯಕ್ತವಾಯಿತು.

ಸಚಿವರು ಪೌರಕಾರ್ಮಿಕರೊಂದಿಗೆ ಆತ್ಮೀಯವಾಗಿ ಬೆರೆತು ಸಮಯ ಕಳೆದಿದ್ದು, ಅವರ ಸೇವೆ ಮತ್ತು ಶ್ರಮಕ್ಕೆ ಗೌರವ ಸೂಚಿಸುವ ಕಾರ್ಯವಾಗಿ ಗಮನ ಸೆಳೆಯಿತು.

ನೂತನ ಸರ್ಕಾರಿ ಆಸ್ಪತ್ರೆ ಶೀಘ್ರ ಉದ್ಘಾಟನೆಗೆ ಸಿದ್ಧತೆ: ಶಾಸಕ ಶಿವಗಂಗಾ ಬಸವರಾಜು

ಮೂರು ಗ್ರಾಮಗಳಲ್ಲಿ ಪಶು ಆಸ್ಪತ್ರೆಗಳ ನಿರ್ಮಾಣಕ್ಕೆ ಶೀಘ್ರ ಶಂಕುಸ್ಥಾಪನೆ

"ಮುಂಜಾನೆಯ ಮೆರಗು"

ದಾವಣಗೆರೆ ಅ, 28– ಚನ್ನಗಿರಿ ತಾಲೂಕಿನಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಸರ್ಕಾರಿ ಆಸ್ಪತ್ರೆಯನ್ನು ಶೀಘ್ರದಲ್ಲೇ ಉದ್ಘಾಟಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಶಿವಗಂಗಾ ಬಸವರಾಜು ತಿಳಿಸಿದರು.

ದಾವಣಗೆರೆಯ ತಮ್ಮ ಗೃಹ ಕಚೇರಿಯಲ್ಲಿ ಚನ್ನಗಿರಿ ತಾಲೂಕು ಆರೋಗ್ಯಾಧಿಕಾರಿ ಪವಿತ್ರಾ, ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿ ಚಂದ್ರಪ್ಪ ಹಾಗೂ ಇತರ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ನೂತನ ಆಸ್ಪತ್ರೆಯ ಉದ್ಘಾಟನೆ ಕುರಿತು ಚರ್ಚಿಸಿದರು.

ಆಸ್ಪತ್ರೆಯ ಉದ್ಘಾಟನೆಗೆ ಸಂಬಂಧಿಸಿದಂತೆ ಆರೋಗ್ಯ ಸಚಿವ ಯು.ಟಿ. ಖಾದರ್ ಅವರೊಂದಿಗೆ ಸಮಾಲೋಚನೆ ನಡೆಸಿ, ಅಗತ್ಯ ಸಿದ್ಧತೆಗಳನ್ನು ಪೂರ್ಣಗೊಳಿಸಲಾಗುವುದು. ಸಚಿವರೊಂದಿಗೆ ಚರ್ಚಿಸಿದ ಬಳಿಕ ಉದ್ಘಾಟನೆಯ ಸೂಕ್ತ ದಿನಾಂಕವನ್ನು ನಿಗದಿಪಡಿಸಲಾಗುವುದು ಎಂದು ಹೇಳಿದರು.



ಇದೇ ಸಂದರ್ಭದಲ್ಲಿ ಚನ್ನಗಿರಿ ವಿಧಾನಸಭಾ ಕ್ಷೇತ್ರದ ನಲ್ಲೂರು, ತಾವರೆಕೆರೆ ಹಾಗೂ ಜೋಳದಾಳು ಗ್ರಾಮಗಳಲ್ಲಿ ನೂತನ ಪಶು ಆಸ್ಪತ್ರೆಗಳ ಕಟ್ಟಡ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸುವ ಕುರಿತು ಜಿಲ್ಲಾ ಪಶುವೈದ್ಯಾಧಿಕಾರಿಗಳೊಂದಿಗೆ ಚರ್ಚಿಸಿದರು. ಶೀಘ್ರದಲ್ಲೇ ಶಂಕುಸ್ಥಾಪನೆಯ ದಿನಾಂಕ ನಿಗದಿಪಡಿಸಿ, ನಿರ್ಮಾಣ ಕಾಮಗಾರಿಗಳಿಗೆ ಚಾಲನೆ ನೀಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವುದರ ಜತೆಗೆ ಗ್ರಾಮೀಣ ಭಾಗದ ರೈತರು ಮತ್ತು ಪಶುಸಂಗೋಪನೆಯಲ್ಲಿ ತೊಡಗಿರುವವರಿಗೆ ಉತ್ತಮ ಪಶುವೈದ್ಯಕೀಯ ಸೌಲಭ್ಯ ಕಲ್ಪಿಸುವುದು ಆದ್ಯತೆಯಾಗಿದೆ. ನೂತನ ಸರ್ಕಾರಿ ಆಸ್ಪತ್ರೆ ಚನ್ನಗಿರಿ ಕ್ಷೇತ್ರದ ಜನತೆಗೆ ಅನುಕೂಲವಾಗಲಿದ್ದು, ಮೂರು ಗ್ರಾಮಗಳಲ್ಲಿ ನಿರ್ಮಾಣವಾಗಲಿರುವ ಪಶು ಆಸ್ಪತ್ರೆಗಳು ಜಾನುವಾರುಗಳ ಆರೋಗ್ಯ ಸಂರಕ್ಷಣೆ ಹಾಗೂ ರೈತರ ಹಿತದೃಷ್ಟಿಯಿಂದ ಮಹತ್ವದ ಪಾತ್ರ ವಹಿಸಲಿವೆ ಎಂದು ಶಾಸಕ ಶಿವಗಂಗಾ ಬಸವರಾಜು ವಿಶ್ವಾಸ ವ್ಯಕ್ತಪಡಿಸಿದರು.

ವಿಧಾನ ಪರಿಷತ್ ಚುನಾವಣೆಯಲ್ಲಿ ಎನ್‌ಡಿಎ ಗೆಲುವು: ಬಿಜೆಪಿ ಕಚೇರಿಯಲ್ಲಿ ವಿಜಯೋತ್ಸವ

"ಮುಂಜಾನೆಯ ಮೆರಗು"

ಬೆಂಗಳೂರು ಅ, 28– ವಿಧಾನ ಪರಿಷತ್ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಗಳು ಜಯಗಳಿಸಿದ ಹಿನ್ನೆಲೆಯಲ್ಲಿ ಬೆಂಗಳೂರಿನ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಬುಧವಾರ ವಿಜಯೋತ್ಸವ ಆಚರಿಸಲಾಯಿತು.



ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಉಪಮುಖ್ಯಮಂತ್ರಿ ಹಾಗೂ ಸಂಸದ ಗೋವಿಂದ ಕಾರಜೋಳ ಸೇರಿದಂತೆ ಬಿಜೆಪಿ ಮುಖಂಡರು ಭಾಗವಹಿಸಿ ವಿಜೇತ ಅಭ್ಯರ್ಥಿಗಳನ್ನು ಅಭಿನಂದಿಸಿದರು.

ಮಾಜಿ ಸಚಿವ ಕೆ. ಗೋಪಾಲಯ್ಯ, ರಾಜ್ಯಸಭಾ ಸದಸ್ಯ ಲೆಹರ್ ಸಿಂಗ್ ಸಿರೋಯ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಶಾಸಕ ಸುನಿಲ್ ಕುಮಾರ್, ಮಾಜಿ ವಿಧಾನ ಪರಿಷತ್ ಸದಸ್ಯ ಶಿವಯೋಗಿಸ್ವಾಮಿ, ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಹಾಗೂ ಶಾಸಕ ಸಿ.ಕೆ. ರಾಮಮೂರ್ತಿ, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್, ಬೆಂಗಳೂರು ಕೇಂದ್ರ ಜಿಲ್ಲಾಧ್ಯಕ್ಷ ಸಪ್ತಗಿರಿ ಗೌಡ, ಎಸ್‌ಟಿ ಮೋರ್ಚಾ ರಾಜ್ಯಾಧ್ಯಕ್ಷ ಬಂಗಾರು ಹನುಮಂತು, ರಾಜ್ಯ ಮುಖ್ಯ ವಕ್ತಾರ ಅಶ್ವಥ್ ನಾರಾಯಣ ಹಾಗೂ ಪ್ರಕೋಷ್ಠಗಳ ರಾಜ್ಯ ಸಂಯೋಜಕ ಎಸ್. ದತ್ತಾತ್ರಿ ಉಪಸ್ಥಿತರಿದ್ದರು.

ವಿಧಾನ ಪರಿಷತ್ ಚುನಾವಣೆಯಲ್ಲಿ ವಿಜೇತರಾದ ಕೆ.ಎಂ. ಸುರೇಶ್ ಮತ್ತು ಎ.ಪಿ. ರಂಗನಾಥ್ ಅವರನ್ನು ಮುಖಂಡರು ಅಭಿನಂದಿಸಿದರು. ಪಕ್ಷದ ಪದಾಧಿಕಾರಿಗಳು, ಮುಖಂಡರು ಹಾಗೂ ಕಾರ್ಯಕರ್ತರು ವಿಜಯೋತ್ಸವದಲ್ಲಿ ಪಾಲ್ಗೊಂಡು ಸಂಭ್ರಮಿಸಿದರು.

ವಿಧಾನ ಪರಿಷತ್ ಚುನಾವಣೆ ಸೋಲು: ಕಾಂಗ್ರೆಸ್‌ನಲ್ಲಿ ಆತ್ಮಾವಲೋಕನಕ್ಕೆ ನಿರ್ಧಾರ

ಮತದಾರರ ವಿಶ್ವಾಸ ಗಳಿಸುವಲ್ಲಿ ಆಗಿರುವ ಲೋಪಗಳ ಕುರಿತು ಸಮಗ್ರ ಪರಾಮರ್ಶೆ: ಬಿ.ಕೆ. ಹರಿಪ್ರಸಾದ್

"ಮುಂಜಾನೆಯ ಮೆರಗು"

ಬೆಂಗಳೂರು ಅ, 28– ವಿಧಾನ ಪರಿಷತ್ತಿನ ಶಿಕ್ಷಕರ ಹಾಗೂ ಪದವೀಧರರ ನಾಲ್ಕೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂಬ ವಿಶ್ವಾಸವಿತ್ತು. ಆದರೆ ಚುನಾವಣಾ ಫಲಿತಾಂಶ ನಿರೀಕ್ಷೆಗೆ ವಿರುದ್ಧವಾಗಿ ಬಂದಿದ್ದು, ಇದನ್ನು ಗಂಭೀರವಾಗಿ ಪರಿಗಣಿಸಿ ಪಕ್ಷದ ಸಂಘಟನಾತ್ಮಕ ಹಾಗೂ ರಾಜಕೀಯ ಕಾರ್ಯತಂತ್ರಗಳ ಕುರಿತು ಸಮಗ್ರ ಆತ್ಮಾವಲೋಕನ ನಡೆಸಲಾಗುವುದು ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ತಿಳಿಸಿದರು.

ಚುನಾವಣಾ ಫಲಿತಾಂಶದ ಕುರಿತು ಪ್ರತಿಕ್ರಿಯಿಸಿದ ಅವರು, ಸೋಲನ್ನು ಕೇವಲ ಚುನಾವಣಾ ಹಿನ್ನಡೆಯಾಗಿ ಪರಿಗಣಿಸದೆ, ಪಕ್ಷದ ಕಾರ್ಯವೈಖರಿಯನ್ನು ಮರುಪರಿಶೀಲಿಸಿಕೊಳ್ಳುವ ಸಂದರ್ಭವಾಗಿ ಸ್ವೀಕರಿಸಿದ್ದೇವೆ. ಸೋಲಿಗೆ ಕಾರಣವಾದ ರಾಜಕೀಯ ಮತ್ತು ಸಂಘಟನಾತ್ಮಕ ಅಂಶಗಳನ್ನು ಗುರುತಿಸಿ, ಅಗತ್ಯ ಸುಧಾರಣೆಗಳನ್ನು ಕೈಗೊಳ್ಳಲಾಗುವುದು ಎಂದರು.

ಶಿಕ್ಷಕರು ಮತ್ತು ಪದವೀಧರರು ಸಮಾಜದ ಪ್ರಜ್ಞಾವಂತ ಮತದಾರರಾಗಿದ್ದು, ಅವರ ನಿರೀಕ್ಷೆಗಳನ್ನು ಅರ್ಥಮಾಡಿಕೊಳ್ಳುವುದು ಹಾಗೂ ಅವರೊಂದಿಗೆ ನಿರಂತರ ಸಂಪರ್ಕದಲ್ಲಿರುವುದು ಅತ್ಯಂತ ಮುಖ್

ಬೆಂಗಳೂರಿನ ಅಭಿವೃದ್ಧಿಗೆ ಮುಂದಿನ 10 ವರ್ಷಗಳಲ್ಲಿ 1 ಲಕ್ಷ ಕೋಟಿ ಹೂಡಿಕೆ ಗುರಿ: ಡಿ.ಕೆ. ಶಿವಕುಮಾರ್

40 ಕಿ.ಮೀ. ಸುರಂಗ ಮಾರ್ಗ, 120 ಕಿ.ಮೀ. ಎತ್ತರಿಸಿದ ಕಾರಿಡಾರ್ ನಿರ್ಮಾಣಕ್ಕೆ ಯೋಜನೆ – ಮೆಟ್ರೋ ಜಾಲ 170 ಕಿ.ಮೀ.ಗೆ ವಿಸ್ತರಣೆ

"ಮುಂಜಾನೆಯ ಮೆರಗು"

ಬೆಂಗಳೂರು ಅ, 28– ರಾಜ್ಯದ ರಾಜಧಾನಿ ಬೆಂಗಳೂರನ್ನು ಸುಗಮ ಸಂಚಾರ, ಸಮರ್ಪಕ ಕುಡಿಯುವ ನೀರು, ಸುಧಾರಿತ ಸಾರ್ವಜನಿಕ ಸಾರಿಗೆ ಹಾಗೂ ಅತ್ಯಾಧುನಿಕ ನಗರ ಮೂಲಸೌಕರ್ಯಗಳನ್ನು ಹೊಂದಿರುವ ಭವಿಷ್ಯಕ್ಕೆ ಸಜ್ಜಾದ ನಗರವನ್ನಾಗಿ ರೂಪಿಸುವ ಉದ್ದೇಶದಿಂದ ಸರ್ಕಾರ ಮಹತ್ವಾಕಾಂಕ್ಷಿ ಅಭಿವೃದ್ಧಿ ಯೋಜನೆಗಳನ್ನು ರೂಪಿಸಿದೆ. ಮುಂದಿನ 10 ವರ್ಷಗಳಲ್ಲಿ ನಗರದ ಸಮಗ್ರ ಅಭಿವೃದ್ಧಿಗಾಗಿ ಅಂದಾಜು 1 ಲಕ್ಷ ಕೋಟಿ ವೆಚ್ಚದ ಯೋಜನೆಗಳನ್ನು ಅನುಷ್ಠಾನಗೊಳಿಸುವ ಗುರಿ ಹೊಂದಲಾಗಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ಅಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್ ತಿಳಿಸಿದರು.

ನಗರದ ಗೃಹ ಕಚೇರಿ ಕೃಷ್ಣಾದಲ್ಲಿ ಮಂಗಳವಾರ ಬೆಂಗಳೂರಿನ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರೊಂದಿಗೆ ಸಭೆ ನಡೆಸಿದ ಅವರು, ನಗರದಲ್ಲಿ ಪ್ರಗತಿಯಲ್ಲಿರುವ ಅಭಿವೃದ್ಧಿ ಕಾಮಗಾರಿಗಳ ಸ್ಥಿತಿಗತಿ ಪರಿಶೀಲಿಸಿದರು. ಜೊತೆಗೆ, ಸಂಚಾರ ದಟ್ಟಣೆ ನಿಯಂತ್ರಣ, ರಸ್ತೆ ಸಂಪರ್ಕ ವ್ಯವಸ್ಥೆ ಸುಧಾರಣೆ, ಮೆಟ್ರೋ ವಿಸ್ತರಣೆ, ಕುಡಿಯುವ ನೀರು ಪೂರೈಕೆ ಹಾಗೂ ಕಸ ನಿರ್ವಹಣೆ ಸೇರಿದಂತೆ ನಗರದ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದ ಹಲವು ಪ್ರಮುಖ ವಿಷಯಗಳ ಕುರಿತು ಚರ್ಚಿಸಿದರು.



ಸಂಚಾರ ದಟ್ಟಣೆ ನಿವಾರಣೆಗೆ ಬೃಹತ್ ಯೋಜನೆ

ಬೆಂಗಳೂರಿನ ಸಂಚಾರ ದಟ್ಟಣೆ ನಗರವಾಸಿಗಳ ದೈನಂದಿನ ಜೀವನದ ಮೇಲೆ ಪರಿಣಾಮ ಬೀರುತ್ತಿರುವ ಹಿನ್ನೆಲೆಯಲ್ಲಿ, ರಸ್ತೆ ಮೂಲಸೌಕರ್ಯ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಲಾಗಿದೆ. ಇದರ ಭಾಗವಾಗಿ 40 ಕಿ.ಮೀ. ಉದ್ದದ ಸುರಂಗ ಮಾರ್ಗಗಳು, 120 ಕಿ.ಮೀ. ಎತ್ತರಿಸಿದ ಕಾರಿಡಾರ್‌ಗಳು ಹಾಗೂ 500 ಕಿ.ಮೀ. ಹೊಸ ರಸ್ತೆ ಸಂಪರ್ಕಗಳನ್ನು ಅಭಿವೃದ್ಧಿಪಡಿಸುವ ಯೋಜನೆ ರೂಪಿಸಲಾಗಿದೆ. ಅಲ್ಲದೆ, ನಗರದ 1,500 ಕಿ.ಮೀ. ಉದ್ದದ ಪ್ರಮುಖ ಮತ್ತು ಉಪಪ್ರಮುಖ ರಸ್ತೆಗಳನ್ನು ಉನ್ನತೀಕರಿಸಲು ಉದ್ದೇಶಿಸಲಾಗಿದೆ.

ಪ್ರಮುಖ ರಸ್ತೆ ಯೋಜನೆಗಳಡಿ 17 ಕಿ.ಮೀ. ಉದ್ದದ ಹೊರವರ್ತುಲ ರಸ್ತೆಯನ್ನು ಮರುಅಭಿವೃದ್ಧಿಪಡಿಸುವುದು, 37 ಕಿ.ಮೀ. ಉದ್ದದ ಡಬಲ್ ಡೆಕ್ಕರ್ ರಸ್ತೆ ನಿರ್ಮಾಣದ ಪ್ರಸ್ತಾವನೆಯನ್ನು ಮುಂದುವರಿಸುವುದು ಹಾಗೂ ನಗರದ ಹೊರವಲಯದಲ್ಲಿ 18 ಕಿ.ಮೀ. ಉದ್ದದ ರಸ್ತೆಗಳಿಗೆ ವೈಟ್ ಟಾಪಿಂಗ್ ಅಳವಡಿಸುವ ಯೋಜನೆಗಳನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ. ಈ ಕಾಮಗಾರಿಗಳಿಂದ ರಸ್ತೆ ಸಂಪರ್ಕ ಸುಧಾರಣೆ ಹಾಗೂ ವಾಹನ ಸಂಚಾರದ ಸುಗಮತೆಗೆ ನೆರವಾಗುವ ನಿರೀಕ್ಷೆಯಿದೆ.

2027ರ ವೇಳೆಗೆ 170 ಕಿ.ಮೀ.ಗೆ ಮೆಟ್ರೋ ಜಾಲ ವಿಸ್ತರಣೆ

ನಗರದ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ, ಪ್ರಸ್ತುತ 96 ಕಿ.ಮೀ. ಇರುವ ಮೆಟ್ರೋ ಜಾಲವನ್ನು 2027ರ ವೇಳೆಗೆ 170 ಕಿ.ಮೀ.ಗೆ ವಿಸ್ತರಿಸುವ ಗುರಿ ಹೊಂದಲಾಗಿದೆ. ಮೆಟ್ರೋ ಸಂಪರ್ಕ ವಿಸ್ತರಣೆಯೊಂದಿಗೆ ಸಾರ್ವಜನಿಕ ಸಾರಿಗೆ ಬಳಕೆಯನ್ನು ಹೆಚ್ಚಿಸಿ, ಖಾಸಗಿ ವಾಹನಗಳ ಮೇಲಿನ ಅವಲಂಬನೆ ಮತ್ತು ರಸ್ತೆ ಮೇಲಿನ ಒತ್ತಡವನ್ನು ಕಡಿಮೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 7,000 ಬಸ್‌ಗಳ ಪಡೆಯ ಜೊತೆಗೆ ಹೆಚ್ಚುವರಿಯಾಗಿ 4,500 ಬಸ್‌ಗಳನ್ನು ಸೇರ್ಪಡೆಗೊಳಿಸಲು ಯೋಜಿಸಲಾಗಿದೆ. ಅಲ್ಲದೆ, 2030ರ ವೇಳೆಗೆ 150 ಕಿ.ಮೀ. ಉದ್ದದ ಉಪನಗರ ರೈಲು ಸಂಪರ್ಕ ಅಭಿವೃದ್ಧಿಪಡಿಸುವ ಉದ್ದೇಶವಿದ್ದು, ಬೆಂಗಳೂರು ಮತ್ತು ಅದರ ಸುತ್ತಮುತ್ತಲಿನ ಪ್ರದೇಶಗಳ ನಡುವೆ ಸಂಪರ್ಕ ವ್ಯವಸ್ಥೆಯನ್ನು ಸುಧಾರಿಸಲು ಯೋಜಿಸಲಾಗಿದೆ.

ಕುಡಿಯುವ ನೀರು, ಒಳಚರಂಡಿ ವ್ಯವಸ್ಥೆಗೂ ಆದ್ಯತೆ

ಬೆಂಗಳೂರಿನ ಜನಸಂಖ್ಯೆ ಹಾಗೂ ನಗರೀಕರಣ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಬೇಡಿಕೆಯನ್ನು ಸಮರ್ಪಕವಾಗಿ ಪೂರೈಸಲು ಕಾವೇರಿ ಆರನೇ ಹಂತದ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ನಗರದ ಹೊರವಲಯದ ಪ್ರದೇಶಗಳಿಗೂ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಜಿಬಿಎ ವ್ಯಾಪ್ತಿಯಿಂದ ಹೊರಗಿರುವ 65 ನಗರೀಕರಣಗೊಂಡ ಗ್ರಾಮ ಪಂಚಾಯಿತಿಗಳಲ್ಲಿ ಹಂತ ಹಂತವಾಗಿ ಕುಡಿಯುವ ನೀರು, ಒಳಚರಂಡಿ ಹಾಗೂ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ.



ಕಸ ನಿರ್ವಹಣೆಯಲ್ಲಿ ಕಟ್ಟುನಿಟ್ಟಿನ ಮೇಲ್ವಿಚಾರಣೆ

ನಗರದ ಸ್ವಚ್ಛತೆ ಕಾಪಾಡುವ ಉದ್ದೇಶದಿಂದ ಕಸ ಸಂಗ್ರಹಣೆ ಮತ್ತು ವಿಲೇವಾರಿ ವ್ಯವಸ್ಥೆಯನ್ನು ಬಲಪಡಿಸಲು ಹೊಸ ಟೆಂಡರ್ ಪ್ರಕ್ರಿಯೆ ರೂಪಿಸುವುದು, ಕಸ ಸಾಗಿಸುವ ವಾಹನಗಳಿಗೆ ಕಡ್ಡಾಯವಾಗಿ ಜಿಪಿಎಸ್ ಅಳವಡಿಸುವುದು ಹಾಗೂ ಕಾಮಗಾರಿಗಳ ಮೇಲೆ ಕಟ್ಟುನಿಟ್ಟಿನ ಮೇಲ್ವಿಚಾರಣೆ ನಡೆಸುವ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ. ಕಸ ವಿಲೇವಾರಿಯಲ್ಲಿ ಪಾರದರ್ಶಕತೆ ಮತ್ತು ಜವಾಬ್ದಾರಿಯನ್ನು ಹೆಚ್ಚಿಸುವ ಮೂಲಕ ನಗರದ ಸ್ವಚ್ಛತಾ ವ್ಯವಸ್ಥೆಯನ್ನು ಸುಧಾರಿಸಲು ಸರ್ಕಾರ ಉದ್ದೇಶಿಸಿದೆ.

ಎಲ್ಲಾ ಕ್ಷೇತ್ರಗಳಿಗೂ ಸಮಾನ ಅಭಿವೃದ್ಧಿಯ ಭರವಸೆ


2037ರಲ್ಲಿ ಬೆಂಗಳೂರು ನಗರ ಸ್ಥಾಪನೆಯ 500ನೇ ವರ್ಷಾಚರಣೆ ನಡೆಯಲಿರುವ ಹಿನ್ನೆಲೆಯಲ್ಲಿ, ನಗರದ ಭವಿಷ್ಯದ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ದೀರ್ಘಕಾಲೀನ ಅಭಿವೃದ್ಧಿ ನೀಲನಕ್ಷೆ ರೂಪಿಸಲಾಗುತ್ತಿದೆ. ಮುಂದಿನ 10 ವರ್ಷಗಳಲ್ಲಿ ಸುಮಾರು 1 ಲಕ್ಷ ಕೋಟಿ ವೆಚ್ಚದ ಅಭಿವೃದ್ಧಿ ಯೋಜನೆಗಳನ್ನು ಕೈಗೊಳ್ಳುವ ಉದ್ದೇಶ ಹೊಂದಲಾಗಿದೆ.

ಬೆಂಗಳೂರಿನ ಸಮಗ್ರ ಅಭಿವೃದ್ಧಿಗೆ ಯಾವುದೇ ತಾರತಮ್ಯವಿಲ್ಲದೆ ಎಲ್ಲ ವಿಧಾನಸಭಾ ಕ್ಷೇತ್ರಗಳಿಗೂ ಅಗತ್ಯ ಅನುದಾನ ಒದಗಿಸಲಾಗುವುದು. ನಗರದ ಅಭಿವೃದ್ಧಿಗೆ ಸಂಬಂಧಿಸಿದ ಆದ್ಯತೆ–ಯ ಕಾಮಗಾರಿಗಳನ್ನು ವೇಗಗೊಳಿಸಿ, ಉತ್ತಮ ರಸ್ತೆ ಸಂಪರ್ಕ, ಪರಿಣಾಮಕಾರಿ ಸಾರ್ವಜನಿಕ ಸಾರಿಗೆ, ಸಮರ್ಪಕ ಕುಡಿಯುವ ನೀರು ಮತ್ತು ಸ್ವಚ್ಛ ಪರಿಸರ ಹೊಂದಿರುವ ನಗರ ನಿರ್ಮಾಣಕ್ಕೆ ಸರ್ಕಾರ ಬದ್ಧವಾಗಿದೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

ಲಿಡ್ಕರ್ ಉತ್ಪನ್ನಗಳು ಲಿಬರ್ಟಿ, ಬಾಟ ಉತ್ಪನ್ನಗಳಿಗಿಂತ ಗುಣಮಟ್ಟದ್ದಾಗಿವೆ : ಸಚಿವ ಮುನಿಯಪ್ಪ

"ಮುಂಜಾನೆಯ ಮೆರಗು"

ಬೆಂಗಳೂರು,ಅ.28– ಲಿಡ್‌ಕರ್ ಉತ್ಪನ್ನಗಳು ಲಿಬರ್ಟಿ, ಬಾಟ ಉತ್ಪನ್ನಗಳಿಗಿಂತ ಕಡಿಮೆ ಇಲ್ಲ ಎಂದು ಸಮಾಜ ಕಲ್ಯಾಣ ಸಚಿವ ಕೆ.ಹೆಚ್. ಮುನಿಯಪ್ಪ ಹೇಳಿದರು. ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವದ್ಧಿ ನಿಗಮ (ಲಿಡ್‌ಕರ್) ಸುವರ್ಣ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಿಮ ಬಳಿಯೇ ತಯಾರಿಸಿ ಅವರು ಲೇಬಲ್ ಅಂಟಿಸಿಕೊಂಡು ಮಾರುತ್ತಿದ್ದಾರೆ. ನೀವು ಅವರಿಗಿಂತ ಮೇಲುಖಿವಾಗಿ ಬೆಳೆಯಬೇಕು. ನಿಮ್ದೆ ಲೇಬಲ್ ಸಷ್ಟಿ ಮಾಡಿ ಉದ್ಯಮಿಗಳಾಗಿ ಬೆಳೆಯಬೇಕು ಎಂದು ಚರ್ಮ ಕುಶಲಕರ್ಮಿಗಳಿಗೆ ಕರೆ ನೀಡಿದರು.



ದೊಡ್ಡ ಚಪ್ಪಲಿ ಬ್ರ್ಯಾಂಡುಗಳಂತೆ ನಮ ಲಿಡ್ಕರ್ ಉತ್ಪನ್ನಗಳು ಕೂಡ ಪ್ರಪಂಚದ್ಯಾಂತ ನಮದೇ ದೊಡ್ಡ ಬ್ರ್ಯಾಂಡುಗಳ ಮೂಲಕ ಬೆಳೆಯಬೇಕು. ಈ ನಿಟ್ಟಿನಲ್ಲಿ ಎಲ್ಲರೂ ಕಾರ್ಯನಿರ್ವಹಿಸಬೇಕು. ಜಿಲ್ಲೆಗೆ ಒಂದೊಂದು ಶೋ ರೂಮ್ ತೆರೆದು ಮಾರಾಟ ವ್ಯವಸ್ಥೆ ಮಾಡಿ ಎಂದು ಸಲಹೆ ನೀಡಿದರು. ಚರ್ಮ ಕುಶಲಕರ್ಮಿಗಳ ಮಕ್ಕಳನ್ನು ವಿದ್ಯಾಭ್ಯಾಸದ ಕಡೆ ಗಮನ ಹರಿಸುವಂತೆ ಮಾಡಬೇಕು.

ವೈದ್ಯರು, ಎಂಜಿನಿಯರ್ ,ಕೆಎಎಸ್ ಆಗಬೇಕು ಎಂಬ ಬಯಕೆ ಇದೆ. ಅದಕ್ಕಾಗಿ ಪ್ರತಿ ಹೋಬಳಿಯಲ್ಲೂ ಒಂದು ವಸತಿ ಶಾಲೆಯನ್ನು ತೆರೆಯಲು ನಿರ್ಧರಿಸಿದ್ದೇವೆ ಎಂದರು. ಈ ಮಹಾತ್ವಕಾಂಕ್ಷಿ ಯೋಜನೆ ಆರಂಭಿಸಲು ಎಲ್ಲಾ ಸಿದ್ಧತೆಗಳು ನಡೆದಿವೆ. ಪ್ರಸ್ತುತ ಇರುವ ಭವನಗಳನ್ನು ಉಪಯೋಗಿಸಿಕೊಂಡು ಅಲ್ಲಿ ಸ್ಪರ್ಧಾತಕ ಪರೀಕ್ಷೆಗಳಿಗೆ ತರಬೇತಿ ನೀಡಲು ಸರ್ಕಾರ ಮುಂದಾಗಿದೆ ಎಂದು ಹೇಳಿದರು.

ಲಿಡ್‌ಕರ್ ನ ಅಧ್ಯಕ್ಷರಾದ ಮುಂಡರಗಿ ನಾಗರಾಜ ಮಾತನಾಡಿ, ಲಿಡ್‌ಕರ್ ಐವತ್ತು ವರ್ಷದ ಸಾರ್ಥಕ ಸಾಧನೆ ಅನುಭವ, ಹೋರಾಟ, ಪರಂಪರೆ, ಕೌಶಲ್ಯ ಮತ್ತು ಸಾಧನೆ,ಇತಿಹಾಸ ಮರುಕಳಿಸಬೇಕು. ಮಾದರ ಚೆನ್ನಯ್ಯ ನಮಗೆ ಸ್ಫೂರ್ತಿ. ಚರ್ಮ ಕುಶಲಕರ್ಮಿಗಳಿಗೆ ಜಾತಿ ಮುಖ್ಯ ಅಲ್ಲ ,ಕೌಶಲ್ಯ ಮುಖ್ಯ,ಇವರ ಶ್ರಮ ನಮ ಶಕ್ತಿ. ಇವರು ಉದ್ಯಮಿಗಳಾಗಬೇಕು.ಸ್ವಂತ ಬ್ರ್ಯಾಂಡ್ ಮಾಲೀಕರಾಗಬೇಕು.ಚರ್ಮ ಕಾಯಕ ಇದು ಜಾತಿಯ ಸಂಕೇತವಲ್ಲ ಇದೊಂದು ಸಂಸ್ಕೃತಿ. ವೈಜ್ಞಾನಿಕ ಅಡಿಪಾಯದಲ್ಲಿ ಬೆಳೆಯಬೇಕು ಎಂದರು.

ಮಾಜಿ ಸಚಿವ ಆಂಜನೇಯ, ಮಾಜಿ ಸಂಸದ ಬಿ.ಎನ್ ಚಂದ್ರಪ್ಪ, ಸರ್ಕಾರದ ಕಾರ್ಯದರ್ಶಿ ಮೋಹನ್ ರಾಜ್, ಆಯುಕ್ತರಾದ ಎನ್.ಎಂ. ನಾಗರಾಜ್, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಧ್ಯಕ್ಷ ನರೇಂದ್ರ, ಅಲೆಮಾರಿ ನಿಗಮದ ಅಧ್ಯಕ್ಷೆ ಪಲ್ಲವಿ, ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಅಶೋಕ್ ಸಾಲಪ್ಪ, ಆದಿ ಜಾಂಬವ ಅಧ್ಯಕ್ಷ ಮಂಜುನಾಥ್, ಆರ್ಯ ವೈಶ್ಯ ನಿಗಮದ ಅಧ್ಯಕ್ಷ ರಾಮಪ್ರಸಾದ್, ವ್ಯವಸ್ಥಾಪಕ ನಿರ್ದೇಶಕ ಡಾ.ಎಚ್. ನಟರಾಜ್ ಹಾಗೂ ಲಿಡ್‌ಕರ್ನ ಮಾಜಿ ಅಧ್ಯಕ್ಷರು, ವ್ಯವಸ್ಥಾಪಕ ನಿರ್ದೇಶಕರು, ಅಧಿಕಾರಿಗಳು ಮುಂತಾದ ಇತರ ದಲಿತ ಸಂಘಟನೆ ಮುಖಂಡರು ಉಪಸ್ಥಿತರಿದ್ದರು.

ನವಜಾತ ಶಿಶುಗಳಿಗೆ ತಾಯಿಹಾಲು ಲಭ್ಯತೆ ಖಚಿತಪಡಿಸಿ: ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್

"ಮುಂಜಾನೆಯ ಮೆರಗು"

ದಾವಣಗೆರೆ ಅ, 28– ನವಜಾತ ಶಿಶುಗಳ ಆರೋಗ್ಯ ರಕ್ಷಣೆ ಹಾಗೂ ಪೌಷ್ಟಿಕ ಬೆಳವಣಿಗೆಯ ದೃಷ್ಟಿಯಿಂದ ತಾಯಿಹಾಲಿನ ಲಭ್ಯತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ತಾಯಿ ಹಾಲು ಬ್ಯಾಂಕ್‌ನ ಸೇವೆಗಳನ್ನು ಮತ್ತಷ್ಟು ಬಲಪಡಿಸುವುದರ ಜತೆಗೆ, ಅರ್ಹ ರೋಗಿಗಳಿಗೆ ಸರ್ಕಾರದ ವಿವಿಧ ಆರೋಗ್ಯ ಯೋಜನೆಗಳ ಪ್ರಯೋಜನಗಳು ಸಕಾಲದಲ್ಲಿ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.



ನಗರದ ಜೆ.ಜೆ.ಎಂ. ವೈದ್ಯಕೀಯ ಮಹಾವಿದ್ಯಾಲಯದ ಸಭಾಂಗಣದಲ್ಲಿ ವೈದ್ಯರು ಹಾಗೂ ಆಸ್ಪತ್ರೆಯ ಸಿಬ್ಬಂದಿಯೊಂದಿಗೆ ನಡೆದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ತಾಯಿ ಹಾಲು ಬ್ಯಾಂಕ್‌ನ ಪ್ರಸ್ತುತ ಕಾರ್ಯನಿರ್ವಹಣೆ, ಸೇವೆಗಳ ವ್ಯಾಪ್ತಿ ಹಾಗೂ ಅವುಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ವಿಸ್ತರಿಸುವ ಸಾಧ್ಯತೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ವಿಶೇಷವಾಗಿ ತಾಯಿಹಾಲು ಲಭ್ಯವಾಗದ ಅಥವಾ ವೈದ್ಯಕೀಯ ಕಾರಣಗಳಿಂದ ತಾಯಿಹಾಲಿನ ಅಗತ್ಯವಿರುವ ನವಜಾತ ಶಿಶುಗಳಿಗೆ ಸೂಕ್ತ ಸಮಯದಲ್ಲಿ ಹಾಲು ದೊರೆಯುವಂತೆ ವ್ಯವಸ್ಥೆ ರೂಪಿಸುವ ಮಹತ್ವವನ್ನು ಚರ್ಚಿಸಲಾಯಿತು.

ತಾಯಿಹಾಲು ಶಿಶುಗಳ ಆರೋಗ್ಯಕರ ಬೆಳವಣಿಗೆಗೆ ಪ್ರಮುಖವಾಗಿದ್ದು, ಅಗತ್ಯವಿರುವ ಶಿಶುಗಳಿಗೆ ಸುರಕ್ಷಿತವಾಗಿ ಸಂಗ್ರಹಿಸಿ ಸಂಸ್ಕರಿಸಿದ ತಾಯಿಹಾಲು ಒದಗಿಸುವಲ್ಲಿ ಹಾಲು ಬ್ಯಾಂಕ್ ಮಹತ್ವದ ಪಾತ್ರ ವಹಿಸುತ್ತದೆ. ಈ ಹಿನ್ನೆಲೆಯಲ್ಲಿ ತಾಯಿ ಹಾಲು ಬ್ಯಾಂಕ್‌ನ ಸೇವೆಗಳ ಕುರಿತು ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವುದು, ತಾಯಂದಿರಿಗೆ ಸೂಕ್ತ ಮಾಹಿತಿ ನೀಡುವುದು ಹಾಗೂ ಆಸ್ಪತ್ರೆಯ ಮಟ್ಟದಲ್ಲಿ ಸೇವೆಗಳ ಸಮನ್ವಯವನ್ನು ಬಲಪಡಿಸುವ ಅಗತ್ಯವಿದೆ ಎಂದು ಸಭೆಯಲ್ಲಿ ಒತ್ತಿಹೇಳಲಾಯಿತು.

ಇದೇ ವೇಳೆ, ಆಸ್ಪತ್ರೆಗಳಿಗೆ ಚಿಕಿತ್ಸೆಗಾಗಿ ಆಗಮಿಸುವ ರೋಗಿಗಳಿಗೆ ಸರ್ಕಾರದ ವಿವಿಧ ಆರೋಗ್ಯ ಯೋಜನೆಗಳ ಸೌಲಭ್ಯಗಳು ಸುಲಭವಾಗಿ ದೊರೆಯುವಂತೆ ಮಾಡುವುದು, ಯೋಜನೆಗಳ ಅರ್ಹತೆ ಮತ್ತು ಸೌಲಭ್ಯಗಳ ಕುರಿತು ರೋಗಿಗಳಿಗೆ ಸ್ಪಷ್ಟ ಮಾಹಿತಿ ನೀಡುವುದು ಹಾಗೂ ಅನುಷ್ಠಾನದಲ್ಲಿ ಎದುರಾಗುವ ಸಮಸ್ಯೆಗಳನ್ನು ಪರಿಹರಿಸುವ ಕುರಿತು ಚರ್ಚೆ ನಡೆಯಿತು.

ಸರ್ಕಾರಿ ಆರೋಗ್ಯ ಯೋಜನೆಗಳ ಪ್ರಯೋಜನಗಳು ಅರ್ಹ ಫಲಾನುಭವಿಗಳಿಗೆ ತಲುಪಿದಾಗ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಚಿಕಿತ್ಸಾ ವೆಚ್ಚದ ಹೊರೆ ಕಡಿಮೆಯಾಗಲಿದೆ. ಹೀಗಾಗಿ ರೋಗಿಗಳ ಅನುಕೂಲಕ್ಕೆ ಆದ್ಯತೆ ನೀಡಿ, ಆರೋಗ್ಯ ಸೇವೆಗಳ ಗುಣಮಟ್ಟವನ್ನು ಸುಧಾರಿಸುವ ನಿಟ್ಟಿನಲ್ಲಿ ವೈದ್ಯರು, ಆಸ್ಪತ್ರೆಯ ಸಿಬ್ಬಂದಿ ಹಾಗೂ ಸಂಬಂಧಪಟ್ಟ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸುವ ಅಗತ್ಯವಿದೆ ಎಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಯಿತು.

ನಾಲ್ಕೂ ವಿಧಾನ ಪರಿಷತ್ ಕ್ಷೇತ್ರಗಳಲ್ಲಿ ಎನ್‌ಡಿಎ ಅಭ್ಯರ್ಥಿಗಳ ಗೆಲುವು ಕಾಂಗ್ರೆಸ್‌ಗೆ ಜನರ ತಕ್ಕ ಉತ್ತರ: ಬಿ.ವೈ. ವಿಜಯೇಂದ್ರ

"ಮುಂಜಾನೆಯ ಮೆರಗು"

ಬೆಂಗಳೂರು ಅ, 28– ಶಿಕ್ಷಕರ ಮತ್ತು ಪದವೀಧರರ ಕ್ಷೇತ್ರಗಳಿಂದ ಕರ್ನಾಟಕ ವಿಧಾನ ಪರಿಷತ್ತಿಗೆ ನಡೆದ ಚುನಾವಣೆಯ ನಾಲ್ಕೂ ಕ್ಷೇತ್ರಗಳಲ್ಲಿ ಎನ್‌ಡಿಎ ಅಭ್ಯರ್ಥಿಗಳು ಜಯಗಳಿಸಿರುವುದು ಕಾಂಗ್ರೆಸ್ ಸರ್ಕಾರದ ಆಡಳಿತಕ್ಕೆ ಮತದಾರರು ನೀಡಿದ ತಕ್ಕ ಉತ್ತರವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಚುನಾವಣೆಯಲ್ಲಿ ವಿಜೇತರಾದ ಕೆ.ಎಂ. ಸುರೇಶ್, ಎಸ್.ವಿ. ಸಂಕನೂರು, ಶಶಿಲ್ ಜಿ. ನಮೋಶಿ ಹಾಗೂ ಎ.ಪಿ. ರಂಗನಾಥ್ ಅವರಿಗೆ ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿರುವ ಅವರು, ಎನ್‌ಡಿಎ ಅಭ್ಯರ್ಥಿಗಳನ್ನು ಬೆಂಬಲಿಸಿ ಗೆಲ್ಲಿಸಿದ ಪದವೀಧರರು ಮತ್ತು ಶಿಕ್ಷಕ ಮತದಾರರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

ಗುರುಪರಂಪರೆ ಮತ್ತು ವಿದ್ವತ್‌ಪೂರ್ಣ ಸಮಾಜದ ಪ್ರತಿನಿಧಿಗಳಾದ ಶಿಕ್ಷಕರು ಹಾಗೂ ಪದವೀಧರರು, ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದ ಮೇಲೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ ಮತ್ತು ಅಭಿವೃದ್ಧಿಯ ಕೊರತೆ–ಯ ವಿರುದ್ಧ ತಮ್ಮ ಮತದಾನದ ಮೂಲಕ ಅಸಮಾಧಾನವನ್ನು ವ್ಯಕ್ತಪಡಿಸಿದ್ದಾರೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಚುನಾವಣಾ ಫಲಿತಾಂಶವು ದೇಶದ ಸಾಂವಿಧಾನಿಕ ಸಂಸ್ಥೆಗಳ ವಿರುದ್ಧ ಅಪಪ್ರಚಾರ ನಡೆಸುವ ಶಕ್ತಿಗಳಿಗೆ ಜನರು ನೀಡಿರುವ ಉತ್ತರವಾಗಿದೆ. ಅಲ್ಲದೆ, ಕರ್ನಾಟಕದಲ್ಲಿ 2028ರಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಗೆ ದಿಕ್ಸೂಚಿಯಾಗಿದೆ ಎಂದು ವಿಜಯೇಂದ್ರ ವಿಶ್ವ

ವಿದ್ಯಾರ್ಥಿ ದೆಸೆಯಲ್ಲಿಯೇ ಕಾನೂನಿನ ಅರಿವು ಬೆಳೆಸಿಕೊಳ್ಳಿ: ತಹಸೀಲ್ದಾರ್ ಗುರುಬಸವರಾಜ್

ಮಕ್ಕಳ ಹಕ್ಕುಗಳ ರಕ್ಷಣೆ, ಬಾಲ್ಯವಿವಾಹ ತಡೆ ಹಾಗೂ ಸಂಚಾರ ನಿಯಮಗಳ ಪಾಲನೆಗೆ ಕರೆ

"ಮುಂಜಾನೆಯ ಮೆರಗು"

ಜಗಳೂರು ಅ, 28– ವಿದ್ಯಾರ್ಥಿಗಳು ಕಲಿಕೆಯ ಹಂತದಲ್ಲಿಯೇ ಕಾನೂನಿನ ಜ್ಞಾನವನ್ನು ಹೊಂದುವುದು ಅತ್ಯಂತ ಮುಖ್ಯವಾಗಿದೆ. ಬಾಲ್ಯದಿಂದಲೇ ಕಾನೂನಿನ ಅರಿವು ಬೆಳೆಸಿಕೊಳ್ಳುವುದರಿಂದ ಭವಿಷ್ಯದಲ್ಲಿ ಜವಾಬ್ದಾರಿಯುತ ನಾಗರಿಕರಾಗಿ ರೂಪುಗೊಳ್ಳಲು ಸಾಧ್ಯವಾಗುತ್ತದೆ ಎಂದು ತಹಸೀಲ್ದಾರ್ ಗುರುಬಸವರಾಜ್ ಹೇಳಿದರು.

ಪಟ್ಟಣದ ಬೇಡರ ಕಣ್ಣಪ್ಪ ವಸತಿ ಪ್ರೌಢಶಾಲೆಯಲ್ಲಿ ಬುಧವಾರ ತಾಲೂಕು ಆಡಳಿತ, ಸಾರ್ವಜನಿಕ ಶಿಕ್ಷಣ ಇಲಾಖೆ, ಶಿಶು ಅಭಿವೃದ್ಧಿ ಇಲಾಖೆ ಹಾಗೂ ಕಾನೂನು ಸೇವಾ ಪ್ರಾಧಿಕಾರದ ವತಿಯಿಂದ ಆಯೋಜಿಸಿದ್ದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ವಿದ್ಯಾರ್ಥಿ ಜೀವನದಲ್ಲಿ ಪ್ರೌಢಶಾಲಾ ಹಂತವು ಅತ್ಯಂತ ಮಹತ್ವದ್ದಾಗಿದೆ. ಈ ಅವಧಿಯಲ್ಲಿ ಮಕ್ಕಳು ಪಠ್ಯಪುಸ್ತಕದ ಕಲಿಕೆಯ ಜತೆಗೆ ಸಮಾಜದಲ್ಲಿ ಜಾರಿಯಲ್ಲಿರುವ ಕಾನೂನುಗಳು, ತಮ್ಮ ಹಕ್ಕುಗಳು ಮತ್ತು ಕರ್ತವ್ಯಗಳ



ಬಗ್ಗೆಯೂ ತಿಳಿದುಕೊಳ್ಳಬೇಕು. ಕಾನೂನಿನ ಅರಿವಿದ್ದಾಗ ಮಾತ್ರ ಒಳ್ಳೆಯದು ಮತ್ತು ಕೆಟ್ಟದ್ದನ್ನು ಗುರುತಿಸಿ, ತಪ್ಪುಗಳನ್ನು ತಡೆಯುವ ಮನೋಭಾವ ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳು ಶಿಸ್ತು, ಸಮಯಪ್ರಜ್ಞೆ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಮೈಗೂಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಂಚಾರ ನಿಯಮ ಪಾಲನೆಗೆ ಆದ್ಯತೆ ನೀಡಿ

ವಕೀಲರ ಸಂಘದ ತಾಲೂಕು ಅಧ್ಯಕ್ಷ ಡಿ.ವಿ. ನಾಗಪ್ಪ ಮಾತನಾಡಿ, 18 ವರ್ಷ ಪೂರ್ಣಗೊಂಡು ಅಗತ್ಯ ಚಾಲನಾ ಪರವಾನಗಿ ಪಡೆದ ನಂತರವೇ ವಾಹನ ಚಲಾಯಿಸಬೇಕು. ಅಪ್ರಾಪ್ತ ವಯಸ್ಸಿನ ಮಕ್ಕಳು ವಾಹನ ಚಾಲನೆ ಮಾಡುವುದರಿಂದ ಅಪಘಾತಗಳು ಸಂಭವಿಸುವ ಸಾಧ್ಯತೆ ಹೆಚ್ಚಿರುತ್ತದೆ. ಹೀಗಾಗಿ ವಿದ್ಯಾರ್ಥಿಗಳು ಸಂಚಾರ ನಿಯಮಗಳನ್ನು ತಿಳಿದುಕೊಂಡು ಅವುಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಹೇಳಿದರು.

ಇಂದಿನ ತಂತ್ರಜ್ಞಾನ ಯುಗದಲ್ಲಿ ಮೊಬೈಲ್ ಬಳಕೆ ಅನಿವಾರ್ಯವಾಗಿದ್ದರೂ, ವಿದ್ಯಾರ್ಥಿಗಳು ಅದಕ್ಕೆ ದಾಸರಾಗಬಾರದು. ಅಗತ್ಯಕ್ಕೆ ತಕ್ಕಂತೆ ಮೊಬೈಲ್ ಬಳಸಬೇಕು. ಮೊಬೈಲ್‌ನಲ್ಲಿ ಅನಗತ್ಯವಾಗಿ ಸಮಯ ಕಳೆಯುವ ಬದಲು ಪುಸ್ತಕ ಓದುವ, ಗ್ರಂಥಾಲಯಕ್ಕೆ ಭೇಟಿ ನೀಡುವ ಹಾಗೂ ಜ್ಞಾನವರ್ಧಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಇಂತಹ ಉತ್ತಮ ಹವ್ಯಾಸಗಳು ವಿದ್ಯಾರ್ಥಿಗಳ ಜ್ಞಾನ ವೃದ್ಧಿಸುವುದರ ಜತೆಗೆ ಭವಿಷ್ಯದ ಸಾಧನೆಗೆ ನೆರವಾಗುತ್ತವೆ ಎಂದು ತಿಳಿಸಿದರು.

ಮಕ್ಕಳ ಮೇಲಿನ ದೌರ್ಜನ್ಯ ತಡೆಯುವುದು ಎಲ್ಲರ ಹೊಣೆ

ಶಿಶು ಅಭಿವೃದ್ಧಿ ಯೋಜನಾಧಿಕಾರಿ (ಸಿಡಿಪಿಒ) ಶಿವಕುಮಾರ್ ಮಾತನಾಡಿ, ಮಕ್ಕಳ ಮೇಲಿನ ದೌರ್ಜನ್ಯ, ಶೋಷಣೆ ಹಾಗೂ ಬಾಲ್ಯವಿವಾಹದಂತಹ ಸಾಮಾಜಿಕ ಪಿಡುಗುಗಳನ್ನು ತಡೆಯಲು ಪ್ರತಿಯೊಬ್ಬರೂ ಜಾಗೃತರಾಗಬೇಕು. ಮಕ್ಕಳು ತಮಗೆ ಎದುರಾಗುವ ಕಿರುಕುಳ ಅಥವಾ ದೌರ್ಜನ್ಯದ ಘಟನೆಗಳನ್ನು



ಮುಚ್ಚಿಡದೆ ಪೋಷಕರು, ಶಿಕ್ಷಕರು ಅಥವಾ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರಬೇಕು. ಮಕ್ಕಳ ಸುರಕ್ಷತೆಗೆ ಕುಟುಂಬದವರು ಮತ್ತು ಶಿಕ್ಷಕರು ವಿಶೇಷ ಆದ್ಯತೆ ನೀಡಬೇಕು ಎಂದು ಹೇಳಿದರು.

ಬಾಲ್ಯವಿವಾಹವು ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಆದ್ದರಿಂದ ಪೋಷಕರು ಮಕ್ಕಳಿಗೆ ಚಿಕ್ಕ ವಯಸ್ಸಿನಲ್ಲಿಯೇ ಮದುವೆ ಮಾಡುವ ಆಲೋಚನೆಯಿಂದ ದೂರವಿರಬೇಕು. ಹೆಣ್ಣುಮಕ್ಕಳು ಮತ್ತು ಗಂಡುಮಕ್ಕಳು ಸಮಾನವಾಗಿ ಶಿಕ್ಷಣ ಪಡೆಯಲು ಅವಕಾಶ ಕಲ್ಪಿಸಬೇಕು. ಬಾಲ್ಯವಿವಾಹ ನಡೆಯುತ್ತಿರುವುದು ಕಂಡುಬಂದಲ್ಲಿ ಅದನ್ನು ತಡೆಯಲು ಮುಂದಾಗಬೇಕು. ಮಕ್ಕಳ ಹಕ್ಕುಗಳ ರಕ್ಷಣೆ ಸಮಾಜದ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಹಾಲಮೂರ್ತಿ, ಸರ್ಕಾರಿ ನೌಕರರ ಸಂಘದ ನಿರ್ದೇಶಕ ಇ. ಸತೀಶ್, ಶಾಲೆಯ ಶಿಕ್ಷಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಅಶ್ವಮೇಧ ಯಾಗದ ಕುದುರೆ ಕಟ್ಟಿಹಾಕಿದ ಎಸ್.ವಿ. ರಾಮಚಂದ್ರ!

ಚುನಾವಣಾ ಫಲಿತಾಂಶದ ಬಳಿಕ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟರ್‌ಗಳ ಚರ್ಚೆ

"ಮುಂಜಾನೆಯ ಮೆರಗು"

ಜಗಳೂರು ಅ, 28– ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಗೆಲುವು ಸಾಧಿಸಿದ ಬೆನ್ನಲ್ಲೇ, ಅಶ್ವಮೇಧ ಯಾಗದ ಕುದುರೆಯನ್ನು ಕಟ್ಟಿ ಹಾಕಿದ ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಎಂಬ ಸಂದೇಶವುಳ್ಳ ಪೋಸ್ಟರ್‌ಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿವೆ.

ಜಗಳೂರು ಪಟ್ಟಣದ ವೀರಶೈವ ಕಲ್ಯಾಣ ಮಂಟಪದಲ್ಲಿ ಆಗ್ನೇಯ ಪದವೀಧರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪರವಾಗಿ ಆಯೋಜಿಸಿದ್ದ ಚುನಾವಣಾ ಪ್ರಚಾರ ಸಭೆಯಲ್ಲಿ ಶಾಸಕ ಬಿ. ದೇವೇಂದ್ರಪ್ಪ ಮಾತನಾಡುವ ಸಂದರ್ಭದಲ್ಲಿ ಅಶ್ವಮೇಧ ಯಾಗದ ಕುದುರೆಯ ಪ್ರಸ್ತಾಪ ಮಾಡಿದ್ದರು.

ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಜಯಗಳಿಸಿದ್ದು, ಇದೀಗ ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿಯೂ ಪಕ್ಷ ಗೆಲುವು ಸಾಧಿಸಲಿದೆ ಎಂಬ ವಿಶ್ವಾಸವನ್ನು ಅವರು ವ್ಯಕ್ತಪಡಿಸಿದ್ದರು. ಇದೇ ಸಂದರ್ಭದಲ್ಲಿ ಚುನಾವಣೆಯ ಹಿನ್ನೆಲೆಯಲ್ಲಿ ಅಶ್ವಮೇಧ ಯಾಗದ ಕುದುರೆಯನ್ನು ಬಿಡಲಾಗಿದೆ. ವಿರೋಧ ಪಕ್ಷದವರು ಸಾಧ್ಯವಾದರೆ ಆ ಕುದುರೆಯನ್ನು ಕಟ್ಟಿ ಹಾಕಲಿ ಎಂಬ ಸವಾಲಿನ ಮಾತುಗಳನ್ನಾಡಿದ್ದರು ಎನ್ನಲಾಗಿದೆ.

ಆದರೆ, ಚುನಾವಣಾ ಫಲಿತಾಂಶ ಪ್ರಕಟಗೊಂಡ ಬಳಿಕ ಬಿಜೆಪಿ ಅಭ್ಯರ್ಥಿ ಗೆಲುವು ಸಾಧಿಸಿರುವ ಹಿನ್ನೆಲೆಯಲ್ಲಿ, ಜಗಳೂರು ತಾಲೂಕು ಬಿಜೆಪಿ ಕಾರ್ಯಕರ್ತರ ಹೆಸರಿನಲ್ಲಿ ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಅವರು ಅಶ್ವಮೇಧ ಯಾಗದ ಕುದುರೆಯನ್ನು ಕಟ್ಟಿ ಹಾಕಿದ್ದಾರೆ ಎಂಬ ಅರ್ಥ ಬಿಂಬಿಸುವ ಪೋಸ್ಟರ್‌ಗಳು ಸಾಮಾಜಿಕ ಜಾಲತಾಣಗಳಲ್ಲಿ ಕಾಣಿಸಿಕೊಂಡಿವೆ.



ಚುನಾವಣಾ ಪ್ರಚಾರದ ವೇಳೆ ಕೇಳಿಬಂದ ಸವಾಲಿನ ಮಾತುಗಳು ಹಾಗೂ ಫಲಿತಾಂಶದ ನಂತರ ಹರಿದಾಡುತ್ತಿರುವ ಪೋಸ್ಟರ್‌ಗಳು ಇದೀಗ ಸ್ಥಳೀಯ ರಾಜಕೀಯ ಚರ್ಚೆಗೆ ಕಾರಣವಾಗಿವೆ. ರಾಜಕೀಯ ಪಕ್ಷಗಳ ನಡುವಿನ ವಾಕ್ಸಮರಕ್ಕೆ ಈ ಬೆಳವಣಿಗೆ ಮತ್ತಷ್ಟು ಕಾವು ನೀಡಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಪರ–ವಿರೋಧದ ಅಭಿಪ್ರಾಯಗಳು ವ್ಯಕ್ತವಾಗುತ್ತಿವೆ.

ಒಟ್ಟಾರೆ, ಚುನಾವಣಾ ಪ್ರಚಾರದ ಸಂದರ್ಭದಲ್ಲಿ ರೂಪಕವಾಗಿ ಬಳಸಲಾದ ಅಶ್ವಮೇಧ ಯಾಗದ ಕುದುರೆಯ ವಿಚಾರವು ಫಲಿತಾಂಶದ ಬಳಿಕವೂ ರಾಜಕೀಯ ಚರ್ಚೆಯ ವಿಷಯವಾಗಿ ಮುಂದುವರಿದಿದೆ.

ಪಾಲನಾಯಕನಕೋಟೆ ಚೌಡೇಶ್ವರಿ ದೇವಿ ಅಗ್ನಿಕುಂಡ ಕಾರ್ಯಕ್ರಮ ಸಂಪನ್ನ

"ಮುಂಜಾನೆಯ ಮೆರಗು"

ಜಗಳೂರು, ಅ.28: ತಾಲ್ಲೂಕಿನ ಪಾಲನಾಯಕನಕೋಟೆ ಗ್ರಾಮದಲ್ಲಿ ಶ್ರೀ ಚೌಡೇಶ್ವರಿ ದೇವಿಯ ಅಗ್ನಿಕುಂಡ ಕಾರ್ಯಕ್ರಮವು ಭಕ್ತಿಭಾವ ಹಾಗೂ ಸಂಭ್ರಮದಿಂದ ಅದ್ದೂರಿಯಾಗಿ ಜರುಗಿ ಸಂಪನ್ನಗೊಂಡಿತು.

ಗ್ರಾಮದ ಆರಾಧ್ಯ ದೇವತೆಯಾದ ಶ್ರೀ ಚೌಡೇಶ್ವರಿ ದೇವಿಯ ಅಗ್ನಿಕುಂಡ ಕಾರ್ಯಕ್ರಮದಲ್ಲಿ ಪಾಲನಾಯಕನಕೋಟೆ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ನೂರಾರು ಭಕ್ತರು ಪಾಲ್ಗೊಂಡು ದೇವಿಯ ದರ್ಶನ ಪಡೆದು ಭಕ್ತಿಯನ್ನು ಸಮರ್ಪಿಸಿದರು. ಭಕ್ತರು ತಮ್ಮ ಹರಕೆಗಳನ್ನು ತೀರಿಸುವುದರ ಜೊತೆಗೆ ದೇವಿಗೆ ವಿಶೇಷ ಪೂಜೆ ಹಾಗೂ ವಿವಿಧ ಧಾರ್ಮಿಕ ಕೈಂಕರ್ಯಗಳನ್ನು ನೆರವೇರಿಸಿ ಆಶೀರ್ವಾದ ಪಡೆದರು.



ಕಾರ್ಯಕ್ರಮದ ಅಂಗವಾಗಿ ಚೌಡೇಶ್ವರಿ ದೇವಿಯ ಪಟ ಹಾಗೂ ಹೂವಿನ ಹಾರದ ಹರಾಜು ಪ್ರಕ್ರಿಯೆ ನಡೆಯಿತು. ಭಕ್ತರು ಉತ್ಸಾಹದಿಂದ ಹರಾಜಿನಲ್ಲಿ ಭಾಗವಹಿಸಿದರು. ಧಾರ್ಮಿಕ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ಕಾರ್ಯಕ್ರಮಕ್ಕೆ ಆಗಮಿಸಿದ ಭಕ್ತಾದಿಗಳಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು. ಗ್ರಾಮದ ಮುಖಂಡರು, ಮಾಜಿ ಸದಸ್ಯರು ಹಾಗೂ ಗ್ರಾಮಸ್ಥರು ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದರು.

ವಿಧಾನ ಪರಿಷತ್ ಚುನಾವಣೆ ಫಲಿತಾಂಶ ಮುಂಬರುವ ಚುನಾವಣೆಗಳಿಗೆ ದಿಕ್ಸೂಚಿ: ಎ.ಎಂ. ಮರುಳಾರಾಧ್ಯ

"ಮುಂಜಾನೆಯ ಮೆರಗು"

ಜಗಳೂರು ಅ, 28– ವಿಧಾನ ಪರಿಷತ್ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಗಳು ನಾಲ್ಕು ಸ್ಥಾನಗಳಲ್ಲಿ ಜಯಗಳಿಸಿರುವುದು ಮುಂಬರುವ ವಿಧಾನಸಭೆ, ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಚುನಾವಣೆಗಳಿಗೆ ದಿಕ್ಸೂಚಿಯಾಗಿದೆ ಎಂದು ಬಿಜೆಪಿ ಮಂಡಲ ಅಧ್ಯಕ್ಷ ಎ.ಎಂ. ಮರುಳಾರಾಧ್ಯ ಹೇಳಿದರು.

ಪಟ್ಟಣದ ಮಹಾತ್ಮ ಗಾಂಧಿ ವೃತ್ತದಲ್ಲಿ ಬುಧವಾರ ಬಿಜೆಪಿ ಮಂಡಲದ ವತಿಯಿಂದ ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಬೆಂಬಲಿತ ಎನ್‌ಡಿಎ ಅಭ್ಯರ್ಥಿಗಳು ಜಯಗಳಿಸಿದ ಹಿನ್ನೆಲೆಯಲ್ಲಿ ಆಯೋಜಿಸಿದ್ದ ವಿಜಯೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿಧಾನ ಪರಿಷತ್ತಿನ ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರಗಳ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಗಳು ಸಾಧಿಸಿರುವ ಗೆಲುವು ಪಕ್ಷದ ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ಮೂಡಿಸಿದೆ. ಪ್ರಜ್ಞಾವಂತ ಮತದಾರರು ಎನ್‌ಡಿಎ ಅಭ್ಯರ್ಥಿಗಳಿಗೆ ಬೆಂಬಲ ನೀಡುವ ಮೂಲಕ ತಮ್ಮ ಒಲವನ್ನು ವ್ಯಕ್ತಪಡಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರದ ಜನಪರ ಯೋಜನೆಗಳು



ಹಾಗೂ ಅಭಿವೃದ್ಧಿ ಕಾರ್ಯಗಳು ಮತದಾರರ ವಿಶ್ವಾಸ ಗಳಿಸುವಲ್ಲಿ ಪ್ರಮುಖ ಪಾತ್ರ ವಹಿಸಿವೆ ಎಂದರು.

ಈ ಚುನಾವಣೆಯ ಫಲಿತಾಂಶ ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿಯೂ ಪಕ್ಷಕ್ಕೆ ಮತ್ತಷ್ಟು ಬಲ ನೀಡಲಿದೆ. ಕಾರ್ಯಕರ್ತರು ಸಂಘಟನೆಯನ್ನು ಬಲಪಡಿಸಿ, ಕೇಂದ್ರ ಮತ್ತು ರಾಜ್ಯ ಮಟ್ಟದಲ್ಲಿ ಪಕ್ಷದ ಸಾಧನೆಗಳನ್ನು ಜನರಿಗೆ ತಲುಪಿಸುವ ಮೂಲಕ ಮುಂದಿನ ಚುನಾವಣೆಗಳಿಗೆ ಸಜ್ಜಾಗಬೇಕು ಎಂದು ಕರೆ ನೀಡಿದರು.

ಬಿಸ್ತುವಳ್ಳಿ ಬಾಬು ಮಾತನಾಡಿ, ಪ್ರಜ್ಞಾವಂತ ಮತದಾರರು ಬಿಜೆಪಿ ಹಾಗೂ ಎನ್‌ಡಿಎ ಅಭ್ಯರ್ಥಿಗಳಿಗೆ ಆದ್ಯತೆ ನೀಡಿದ್ದಾರೆ. ಬಿಜೆಪಿಯ ಜನಪರ ಯೋಜನೆಗಳು ಮತ್ತು ಅಭಿವೃದ್ಧಿಪರ ನಿಲುವುಗಳು ಜನರನ್ನು ತಲುಪಿವೆ ಎಂಬುದಕ್ಕೆ ಈ ಚುನಾವಣೆಯ ಫಲಿತಾಂಶ ಸಾಕ್ಷಿಯಾಗಿದೆ. ಪಕ್ಷದ ಕಾರ್ಯಕರ್ತರ ಶ್ರಮ ಮತ್ತು ಮತದಾರರ ಬೆಂಬಲದಿಂದ ಈ ಗೆಲುವು ಸಾಧ್ಯವಾಗಿದೆ ಎಂದು ಹೇಳಿದರು.

ಬಿದರಕೆರೆ ರವಿ ಮಾತನಾಡಿ, ವಿಧಾನ ಪರಿಷತ್ ಚುನಾವಣೆಯಲ್ಲಿ ಗೆಲುವು ಸಾಧಿಸುವುದು ಸುಲಭದ ಮಾತಲ್ಲ. ಪ್ರತಿಸ್ಪರ್ಧಿಗಳ ಸವಾಲುಗಳ ನಡುವೆಯೂ ಎನ್‌ಡಿಎ ಅಭ್ಯರ್ಥಿಗಳು ಜಯಗಳಿಸಿರುವುದು ಪಕ್ಷದ ಸಂಘಟನಾ ಶಕ್ತಿಯನ್ನು ತೋರಿಸುತ್ತದೆ. ಈ ಫಲಿತಾಂಶವನ್ನು ಕಾಂಗ್ರೆಸ್ ಪಕ್ಷದ ನಾಯಕರು ಗಂಭೀರವಾಗಿ ಪರಿಗಣಿಸಬೇಕು ಎಂದರು.

ಜಗಳೂರು ವಿಧಾನಸಭಾ ಕ್ಷೇತ್ರದಲ್ಲಿ ಶಾಸಕರ ರಾಜಕೀಯ ಪ್ರಾಬಲ್ಯಕ್ಕೆ ಬಿಜೆಪಿ ಕಾರ್ಯಕರ್ತರು ಸಂಘಟಿತವಾಗಿ ಸವಾಲು ಹಾಕಿದ್ದಾರೆ. ಮುಂದಿನ ಚುನಾವಣೆಗಳಲ್ಲಿಯೂ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸಿ, ಗಟ್ಟಿಯಾಗಿ ಸ್ಪರ್ಧಿಸಲು ಸಿದ್ಧರಾಗಿದ್ದೇವೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಂಗವಾಗಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಮಹಾತ್ಮ ಗಾಂಧಿ ವೃತ್ತದಲ್ಲಿ ಪಟಾಕಿ ಸಿಡಿಸಿ, ಪರಸ್ಪರ ಸಿಹಿ ಹಂಚುವ ಮೂಲಕ ವಿಜಯೋತ್ಸವ ಆಚರಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ವಿವಿಧ ಮೋರ್ಚಾಗಳ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

ತರಕಾರಿ ಮಾರಾಟದಲ್ಲಿ ಶುಚಿತ್ವ, ಗುಣಮಟ್ಟಕ್ಕೆ ಆದ್ಯತೆ ನೀಡಿ: ಸಿ. ಲೋಕ್ಯಾನಾಯ್ಕ

"ಮುಂಜಾನೆಯ ಮೆರಗು"

ಜಗಳೂರು ಅ, 28– ಸೊಪ್ಪು ಮತ್ತು ತರಕಾರಿ ಮಾರಾಟಗಾರರು ವ್ಯಾಪಾರದ ಸಂದರ್ಭದಲ್ಲಿ ಶುಚಿತ್ವ ಹಾಗೂ ಗುಣಮಟ್ಟಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಗ್ರಾಹಕರ ಆರೋಗ್ಯದ ದೃಷ್ಟಿಯಿಂದ ಸ್ವಚ್ಛ ಪರಿಸರದಲ್ಲಿ ಗುಣಮಟ್ಟದ ತರಕಾರಿಗಳನ್ನು ಮಾರಾಟ ಮಾಡುವ ಮೂಲಕ ಸಾರ್ವಜನಿಕರಲ್ಲಿ ವಿಶ್ವಾಸ ಮೂಡಿಸಬೇಕು ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿ. ಲೋಕ್ಯನಾಯಕ ಹೇಳಿದರು.

ಪಟ್ಟಣದ ತರಕಾರಿ ಮಾರುಕಟ್ಟೆಗೆ ಬುಧವಾರ ಮುಂಜಾನೆ ಭೇಟಿ ನೀಡಿ, ಸೊಪ್ಪು ಮತ್ತು ತರಕಾರಿ ಮಾರಾಟ ಮಾಡುತ್ತಿದ್ದ ವ್ಯಾಪಾರಿಗಳಿಗೆ ಶುಚಿತ್ವ ಕಾಪಾಡುವ ಕುರಿತು ಸಲಹೆ ಹಾಗೂ ಸೂಚನೆಗಳನ್ನು ನೀಡಿದರು.

ಸೊಪ್ಪು ಮತ್ತು ತರಕಾರಿಗಳನ್ನು ಧೂಳು ತಾಗದಂತೆ ಸ್ವಚ್ಛವಾಗಿ ಇಡಬೇಕು. ಕೊಳಕು ಹಾಗೂ ಧೂಳಿನಿಂದ ತರಕಾರಿಗಳು ಕಲುಷಿತಗೊಳ್ಳದಂತೆ ಎಚ್ಚರ ವಹಿಸಬೇಕು. ಗ್ರಾಹಕರಿಗೆ ತಾಜಾ ಮತ್ತು ಗುಣಮಟ್ಟದ ತರಕಾರಿಗಳನ್ನು ಒದಗಿಸುವುದು ಪ್ರತಿಯೊಬ್ಬ ವ್ಯಾಪಾರಿಯ



ಜವಾಬ್ದಾರಿಯಾಗಿದೆ. ವ್ಯಾಪಾರ ನಡೆಸುವ ಸ್ಥಳದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡುವುದರ ಜತೆಗೆ, ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು ಎಂದು ತಿಳಿಸಿದರು.

ತರಕಾರಿ ಮಾರುಕಟ್ಟೆಯಲ್ಲಿ ಸ್ವಚ್ಛತೆ ಕಾಪಾಡುವುದು ವ್ಯಾಪಾರಿಗಳಷ್ಟೇ ಅಲ್ಲದೆ, ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದಲೂ ಅತ್ಯಂತ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ವ್ಯಾಪಾರಿಗಳು ಪಟ್ಟಣ ಪಂಚಾಯಿತಿಯ ಸೂಚನೆಗಳನ್ನು ಪಾಲಿಸಿ, ಸ್ವಚ್ಛ ಹಾಗೂ ವ್ಯವಸ್ಥಿತವಾಗಿ ವ್ಯಾಪಾರ ವಹಿವಾಟು ನಡೆಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ದಫೇದಾರ್ ಪರಶುರಾಮ, ಜಿಲಾನಿ, ವಿನಯ್, ಮಮತಾ, ನೇತ್ರಾ ಉಪಸ್ಥಿತರಿದ್ದರು.

ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಅಗತ್ಯ ಅನುದಾನ: ಜಿ.ಪಂ. ಸಿಇಒ ಸಾಹಿತ್ಯ ಎಂ. ಆಲದಕಟ್ಟಿ

"ಮುಂಜಾನೆಯ ಮೆರಗು"

ಜಗಳೂರು, ಅ. 28– ತಾಲ್ಲೂಕಿನ ಸಂತೆಮುದ್ದಾಪುರ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ ಜನವರಿ ತಿಂಗಳಲ್ಲಿ ಪ್ರಾಯೋಗಿಕ ಚಾಲನೆ ನೀಡಲು ಉದ್ದೇಶಿಸಲಾ